ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು
JSS MAHAVIDYAPEETHA, MYSURU

# ಜೆಎಸ್‌ಎಸ್ ವಾರ್ತಾಪತ್ರ

## ಮಾಸಪತ್ರಿಕೆ

# JSS VARTHAPATHRA

## Monthly Magazine

ಸಂಪುಟ 9 | ಸಂಚಿಕೆ 2 | ಫೆಬ್ರವರಿ 2024



ಅಯೋಧ್ಯೆಯಲ್ಲಿ ನಡೆದ ಶ್ರೀರಾಮ ಮಂದಿರ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪರಮಪೂಜ್ಯ ಜಗದ್ಗುರುಗಳವರು ಹಾಗೂ ಆದಿಚುಂಚನಗಿರಿ ಜಗದ್ಗುರುಗಳವರು, ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮಿಗಳು, ಶ್ರೀ ವಚನಾನಂದ ಸ್ವಾಮಿಗಳು, ಶ್ರೀ ಶಾಂತವೀರ ಸ್ವಾಮಿಗಳು, ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮಿಗಳು, ಶ್ರೀ ನಿರಂಜನಾನಂದಪುರಿ ಮಹಾಸ್ವಾಮಿಗಳಿದ್ದಾರೆ (22 ಜನವರಿ 2024)



ಶ್ರೀ ಸುತ್ತೂರು ಕ್ಷೇತ್ರದಲ್ಲಿ ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ 1064ನೆಯ ಜಯಂತಿ ಮಹೋತ್ಸವದಲ್ಲಿ ಭಾಗವಹಿಸಿದ್ದ ಶ್ರೀ ಜಾವಗಲ್ ಶ್ರೀನಾಥ್ ಮತ್ತು ಅವರ ಕುಟುಂಬವರ್ಗದವರನ್ನು ಪರಮಪೂಜ್ಯ ಜಗದ್ಗುರುಗಳವರು ಸನ್ಮಾನಿಸಿ ಆಶೀರ್ವದಿಸಿದರು.




ಶ್ರೀ ಸುತ್ತೂರು ಕ್ಷೇತ್ರದಲ್ಲಿ ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ 1064ನೆಯ ಜಯಂತಿ ಮಹೋತ್ಸವದಲ್ಲಿ ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ವಿವಿಧ ಪ್ರಶಸ್ತಿ ಪುರಸ್ಕೃತರಾದ ಶ್ರೀ ಕಬ್ಬಿನಾಲೆ ವಸಂತ ಭಾರದ್ವಾಜ್, ಡಾ. ಸಿ. ರಾಮಚಂದ್ರ, ಶ್ರೀ ವಿ. ನಾಗರಾಜು, ಶ್ರೀ ಕೆ.ಟಿ. ಚಂದು, ಡಾ. ನಾಗಣ್ಣರವರುಗಳನ್ನು ಸನ್ಮಾನಿಸಲಾಯಿತು.

## ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಜಯಂತಿ ಮಹೋತ್ಸವ

**ಶ್ರೀ ಸುತ್ತೂರು ಕ್ಷೇತ್ರದಲ್ಲಿ** ಜನವರಿ 10ರಂದು ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ 1064ನೆಯ ಜಯಂತಿ ಮಹೋತ್ಸವವು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯಸಾನ್ನಿಧ್ಯದಲ್ಲಿ ಹಾಗೂ ಮಠಾಧೀಶರುಗಳ ಸಮ್ಮುಖದಲ್ಲಿ ನೆರವೇರಿತು.

ಪ್ರಾತಃಕಾಲ 3.00 ಗಂಟೆಗೆ ಕರ್ತೃಗದ್ದುಗೆಯಲ್ಲಿ ರುದ್ರಾಭಿಷೇಕ, ಸಹಸ್ರನಾಮಾವಳಿ, ಶಿವಾಷ್ಟೋತ್ತರ, ಶಿವರಾತ್ರೀಶ್ವರ ಅಷ್ಟೋತ್ತರ ಇತ್ಯಾದಿ ವಿಶೇಷ ಪೂಜೆಗಳು ಹಾಗೂ ಆದಿಜಗದ್ಗುರುಗಳವರ ಉತ್ಸವಮೂರ್ತಿಗೆ ಷೋಡಶೋಪಚಾರ ಪೂಜೆಗಳು ನೆರವೇರಿದವು. ಆದಿ ಜಗದ್ಗುರುಗಳ ಉತ್ಸವಮೂರ್ತಿಯ ಮೆರವಣಿಗೆಯು ಶ್ರೀಮಠದ ಬಿರುದು ಬಾವಲಿಗಳು, ಮಂಗಳವಾದ್ಯ, ಎನ್‌ಸಿಸಿ, ವೀರಗಾಸೆ ಹಾಗೂ ಜನಪದ ಕಲಾ ತಂಡಗಳೊಂದಿಗೆ ಸುತ್ತೂರಿನ ಪ್ರಮುಖ ಬೀದಿಗಳಲ್ಲಿ ನೆರವೇರಿತು.

ಇದೇ ಸಂದರ್ಭದಲ್ಲಿ ವಿವಿಧ ಪ್ರಶಸ್ತಿಗಳ ಪುರಸ್ಕೃತರಿಗೆ ಸನ್ಮಾನ ಸಮಾರಂಭವನ್ನು ಏರ್ಪಡಿಸಲಾಗಿತ್ತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಮುಂಡರಗಿ ಶ್ರೀ ತೋಂಟದಾರ್ಯ ಶಾಖಾ ಮಠದ ಶ್ರೀ ನಿಜಗುಣಪ್ರಭು ತೋಂಟದಾರ್ಯ ಸ್ವಾಮಿಗಳು ಕರ್ನಾಟಕ ರಾಜ್ಯವು ಉಳಿದ ರಾಜ್ಯಗಳಿಗಿಂತ ವಿಭಿನ್ನವಾಗಿದೆ. ಶರಣರ ತತ್ವಗಳಿಗನುಗುಣವಾಗಿ ಸ್ಥಾಪಿತವಾದ ಮಠಗಳು ಸಮಾಜಕ್ಕೆ ಅಪಾರ ಸೇವೆಯನ್ನು ನೀಡುತ್ತಿವೆ. ಲಕ್ಷಾಂತರ ವಿದ್ಯಾರ್ಥಿಗಳ ಪಾಲಿಗೆ ಕಾಮಧೇನುವಾಗಿದ್ದು, ಅಕ್ಷರ, ಆಶ್ರಯ, ಅನ್ನ ನೀಡಿ ಅವರ ಬದುಕಿಗೆ ದಾರಿದೀಪವಾಗಿವೆ. ಬಸವಣ್ಣನವರು ಬೇರೆ ಬೇರೆ ರಾಜ್ಯಗಳಿಂದ ಬಂದಂತಹ ಶರಣರಿಗೆ ಕನ್ನಡವನ್ನು ಕಲಿಸಿ, ಕನ್ನಡದಲ್ಲೇ ವಚನಗಳನ್ನು ಬರೆಸುತ್ತಿದ್ದರು. ಇಂದಿಗೂ ಮಠಗಳು ಶರಣರ ತತ್ವಗಳನ್ನು ನಿರಂತರವಾಗಿ ಪಾಲಿಸಿಕೊಂಡು ಬರುತ್ತಿವೆ ಎಂದು ಹೇಳಿದರು.

ಸ್ಟಾರ್ ಆಫ್ ಮೈಸೂರು ಹಾಗೂ ಮೈಸೂರು ಮಿತ್ರ ದಿನಪತ್ರಿಕೆಯ ಪ್ರಧಾನ ಸಂಪಾದಕರಾದ ಡಾ. ಕೆ.ಬಿ. ಗಣಪತಿಯವರು ಸುತ್ತೂರು ಶ್ರೀಕ್ಷೇತ್ರವು ಸಾಧು, ಸಂತರು ಮತ್ತು ಋಷಿಮುನಿಗಳ ತಪೋಭೂಮಿ. ಶ್ರೀಮಠವು ರಾಜ್ಯವು ಅತಿವೃಷ್ಟಿ, ಅನಾವೃಷ್ಟಿ ಹಾಗೂ ಪ್ರಕೃತಿ ವಿಕೋಪದಂತಹ ಸಂಕಷ್ಟದ ಸಂದರ್ಭಗಳಲ್ಲಿ ನಿರಂತರವಾಗಿ ನೆರವಿನ ಹಸ್ತ ನೀಡುತ್ತಾ ಬಂದಿರುವುದು ಶ್ಲಾಘನೀಯವಾಗಿದೆ ಎಂದರು. ಮತ್ತೊಬ್ಬ ಪ್ರಶಸ್ತಿ ಪುರಸ್ಕೃತರಾದ ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್‌ರವರು ಸುತ್ತೂರು ಮಠವು ನಮ್ಮನ್ನು ಸನ್ಮಾನಿಸಿ ಆಶೀರ್ವದಿಸಿರುವುದರಿಂದ ಸಮಾಜಕ್ಕೆ ಇನ್ನೂ ಹೆಚ್ಚಿನ ಸೇವೆಯನ್ನು ನೀಡುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಶ್ರೀ ವೂಡೇ ಪಿ. ಕೃಷ್ಣ, ಪ್ರೊ. ಸಿ. ನಾಗಣ್ಣ, ಶ್ರೀ ಅರವಿಂದ ಜತ್ತಿ, ಶ್ರೀ ಜಾವಗಲ್ ಶ್ರೀನಾಥ್, ಶ್ರೀ ಎಸ್. ಷಡಕ್ಷರಿ, ಬೆಂಗಳೂರಿನ ಮಿಥಿಕ್ ಸೊಸೈಟಿಯ ಶ್ರೀ ನಾಗರಾಜುರವರು ಮಾತನಾಡಿದರು. ಡಾ. ಸಿ. ರಾಮಚಂದ್ರ, ಶ್ರೀ ಕೆ.ಟಿ. ಚಂದು, ಶ್ರೀ ಪಿ. ಗಂಗಾಧರ ಸ್ವಾಮಿ, ಶ್ರೀ ಮಹದೇವು, ಶ್ರೀ ಗೌರಯ್ಯ ಹಾಗೂ ಶ್ರೀ ಜವರಪ್ಪರವರುಗಳನ್ನು ಸನ್ಮಾನಿಸಲಾಯಿತು.

ಜ್ಯೋತಿಷ ಮಹಾಮಹೋಪಾಧ್ಯಾಯ ಡಾ. ಕೆ.ಜಿ. ಪುಟ್ಟಹೊನ್ನಯ್ಯನವರು ಸಿದ್ಧಪಡಿಸಿ, ಭಾರತೀಯ ಜ್ಯೋತಿರ್ವಿಜ್ಞಾನ ಸಂಶೋಧನಾ ಕೇಂದ್ರದಿಂದ ಪ್ರಕಟಿಸಿರುವ ಶ್ರೀ ಕ್ರೋಧಿ ಸಂವತ್ಸರದ 'ಸುತ್ತೂರು ಶ್ರೀ ಶಿವರಾತ್ರೀಶ್ವರ ಪಂಚಾಂಗ' ಮತ್ತು 2024ನೇ ಇಸವಿಯ ಜೆಎಸ್‌ಎಸ್ ಮಹಾವಿದ್ಯಾಪೀಠ ಹೊರತಂದಿರುವ ಕನ್ನಡ ಮತ್ತು ಇಂಗ್ಲಿಷ್ ಟೇಬಲ್ ಕ್ಯಾಲೆಂಡರ್‌ಗಳನ್ನು ಹಾಗೂ ಬೆಂಗಳೂರು ಚೈತನ್ಯ ಶಾಲೆಯ ವಿದ್ಯಾರ್ಥಿನಿ ಹಾಗೂ ಕವಯಿತ್ರಿಯಾದ ಕು. ನೇತ್ರಾ ಕೆ. ಪರ್ಲ್‌ಸನ್‌ರವರು ರಚಿಸಿರುವ 'ಒನ್ ಮೈಂಡ್ ಗೇಮ್' ಕೃತಿಯನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ವಾಟಾಳು, ಬೆಟ್ಟದಪುರ, ಪಡಗೂರು, ಸೋಮಳ್ಳಿ, ಪಡುವಲು, ಮಲ್ಲನಮೂಲೆ, ದೇವನೂರು, ಹೊಸಮಠ, ಕುದೇರು, ಚಿಕ್ಕತುಪ್ಪೂರು, ಕುಂದೂರು, ಬರಡನಪುರ, ಗೌಡಹಳ್ಳಿ, ಮಾದಳ್ಳಿ, ದಂಡಿಕೆರೆ, ಮುಡಿಗುಂಡ, ಸೋಮಹಳ್ಳಿ, ನೀಲಕಂಠಸ್ವಾಮಿಮಠ, ಗಾವಡಗೆರೆ, ಹಾಲಹಳ್ಳಿ, ರಾಮಾಪುರ, ಚುಂಚನಹಳ್ಳಿ, ಹಂಗಳ, ಕಸುವಿನಹಳ್ಳಿ, ಶಿರಮಳ್ಳಿ, ಮಾದಾಪುರ, ನಂಜನಗೂಡು ಹಾಗೂ ನವಿಲೂರು ಮಠಗಳ ಶ್ರೀಗಳು ಹಾಗೂ ಹರಗುರು ಚರಮೂರ್ತಿಗಳು, ಮಾಜಿ ಸಂಸದರಾದ ಶ್ರೀ ಎಂ. ಶಿವಣ್ಣ, ಮಾಜಿ ಶಾಸಕರಾದ ಡಾ. ಯತೀಂದ್ರ ಸಿದ್ದರಾಮಯ್ಯ, ಶ್ರೀ ಎಸ್. ಬಾಲರಾಜು,

ಸಹಸ್ರಾರು ಭಕ್ತಾದಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

ಜೆಎಸ್‌ಎಸ್ ಕಲಾಮಂಟಪ ಹಾಗೂ ಶ್ರೀಕ್ಷೇತ್ರದ ಜೆಎಸ್‌ಎಸ್ ವಸತಿ ಶಾಲೆಯ ಸಂಗೀತ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ಪ್ರೊ. ಮೊರಬದ ಮಲ್ಲಿಕಾರ್ಜುನ ಸ್ವಾಗತಿಸಿದರು. ಶ್ರೀ ಬಿ. ನಿರಂಜನಮೂರ್ತಿ ನಿರೂಪಿಸಿ, ವಂದಿಸಿದರು.

## ಸುತ್ತೂರು ಶ್ರೀಮಠ ಮೌಲ್ಯಾಧಾರಿತ ಶಿಕ್ಷಣ ನೀಡುತ್ತಿದೆ

ಸಹಸ್ರಾರು ವಿದ್ಯಾರ್ಥಿಗಳಿಗೆ ಮೌಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಸುತ್ತೂರು ಶ್ರೀಮಠವು ಸದೃಢ ದೇಶ ಕಟ್ಟುವ ಕಾಯಕ ಮಾಡುತ್ತಿದೆ ಎಂದು ಇನ್ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷರಾದ ಶ್ರೀಮತಿ ಸುಧಾಮೂರ್ತಿಯವರು ಹೇಳಿದರು.

**ಶ್ರೀ ಸುತ್ತೂರು ಕ್ಷೇತ್ರದಲ್ಲಿ** ದಿನಾಂಕ 10.1.2024ರಂದು ಪರಮಪೂಜ್ಯ ಜಗದ್ಗುರುಗಳವರ ದಿವ್ಯಸಾನ್ನಿಧ್ಯದಲ್ಲಿ ವಸತಿ ಶಾಲೆಯ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು ಜೀವನದಲ್ಲಿ ಗುರುವಿನ ಮಾರ್ಗದರ್ಶನ ತುಂಬಾ ಅವಶ್ಯಕ. ಗುರುವನ್ನು ಆಚಾರ್ಯ ದೇವೋಭವ ಎಂದು ದೇವರಿಗೆ ಹೋಲಿಸುತ್ತಾರೆ. ಶ್ರೀಕ್ಷೇತ್ರದ ಪುಣ್ಯಭೂಮಿಯಲ್ಲಿ ಸಹಸ್ರಾರು ವಿದ್ಯಾರ್ಥಿಗಳನ್ನು ಯಾವುದೇ ಭೇದಭಾವವಿಲ್ಲದೆ ಎಲ್ಲರನ್ನೂ ಸಮಾನವಾಗಿ ಬೆಳೆಸುತ್ತಿರುವುದು ಸಾಮಾನ್ಯ ಸಂಗತಿಯಲ್ಲ. ವಿದ್ಯಾರ್ಥಿಗಳು ಶ್ರದ್ಧೆಯಿಂದ ಓದಿ, ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು. ದೊಡ್ಡವರಾದ ಮೇಲೆ ಗುರುಗಳನ್ನು ಮರೆಯದೆ ಸ್ಮರಿಸಬೇಕು. ಅವಶ್ಯಕತೆ ಇರುವವರಿಗೆ ನಮ್ಮ ಕೈಲಾದ ಸಹಾಯ ಮಾಡಬೇಕು. ಇಂತಹ ಮಾನವೀಯ ಮೌಲ್ಯಗಳನ್ನೆ ಶರಣರ ವಚನಗಳಲ್ಲೂ ಕಾಣಬಹುದು. ಬಿಡುವಿನ ಸಮಯದಲ್ಲಿ ವಚನಗಳನ್ನು ಅಭ್ಯಾಸ ಮಾಡುವ ಮೂಲಕ ಜೀವನದಲ್ಲೂ ಅವುಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.


ಅನಿವಾಸಿ ಭಾರತೀಯರಾದ ಡಾ. ಪೂರ್ಣಿಮಾ ಮದಿವನ್ನನ್‌ರವರು ಶ್ರೀಕ್ಷೇತ್ರದ ಭಕ್ತಿ, ಶಿಸ್ತು ನೋಡಿ ಅತ್ಯಂತ ಸಂತೋಷವಾಯಿತು. ಇಲ್ಲಿನ ವಿದ್ಯಾರ್ಥಿಗಳನ್ನು ನೋಡಿ ಉತ್ಸಾಹ ಇಮ್ಮಡಿಯಾಯಿತು. ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹೆತ್ತವರು ಎಷ್ಟೊಂದು ಕಷ್ಟಪಡುತ್ತಾರೆ ಎಂಬುದನ್ನು ನಾವು ಅರಿತುಕೊಳ್ಳಬೇಕು. ನಮ್ಮ ಹೆತ್ತವರು ನಮಗಾಗಿ ಕಷ್ಟಪಡುವುದರಿಂದ ಅವರನ್ನು ಸದಾ ಸ್ಮರಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಆರೋಗ್ಯ, ಸ್ವಚ್ಛ ಮನಸ್ಸು ಮತ್ತು ಹೃದಯ ಶುದ್ಧತೆಯನ್ನು ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಬಂಡೀಪುರದ ಬುಡಕಟ್ಟು ಮಹಿಳೆ ಡಾ. ರತ್ನಮ್ಮನವರು ಹುಟ್ಟು ಅಂಧರಾಗಿದ್ದ ತಂದೆ, ಸಂಕಷ್ಟಗಳ ನಡುವೆ ನಮ್ಮನ್ನು ಸಾಕಲು ನಮ್ಮ ತಾಯಿ ಪಡುತ್ತಿದ್ದ ಕಷ್ಟ ಅಷ್ಟಿಷ್ಟಲ್ಲ. ಬಾಲ್ಯದಲ್ಲಿ ಅರಣ್ಯ ಪ್ರದೇಶದಲ್ಲಿ ಸಿಗುವ ನೆಲ್ಲಿಕಾಯಿ ಸಂಗ್ರಹಿಸಿ ಅವುಗಳನ್ನು ಮಾರಾಟ ಮಾಡಿ ಜೀವನ ಮಾಡಿದೆ. ಶಾಲೆಗೆ ನಾನು ಹೋಗುತ್ತಿದ್ದುದು ವಿದ್ಯೆಗಿಂತ ಹೆಚ್ಚಾಗಿ ನನ್ನ ಹಸಿವಿಗೆ ಆಶ್ರಮ ಶಾಲೆಯಲ್ಲಿ ಕೊಡುತ್ತಿದ್ದ ಗಂಜಿ ಮತ್ತು ಊಟಕ್ಕಾಗಿ. ವಿದ್ಯಾರ್ಥಿಗಳು ಸಿಗುವ ಅವಕಾಶಗಳನ್ನು ಜ್ಞಾನಾರ್ಜನೆಗೆ ಬಳಸಿಕೊಳ್ಳುವ ಮೂಲಕ ಸ್ವಾವಲಂಬಿ ಜೀವನವನ್ನು ರೂಪಿಸಿಕೊಳ್ಳಿ ಎಂದು ತಿಳಿಸಿದರು.

## ವಿದ್ಯಾರ್ಥಿಗಳು ದೊಡ್ಡ ಕನಸುಗಳನ್ನು ಕಟ್ಟಿಕೊಳ್ಳಬೇಕು

ವಿದ್ಯಾರ್ಥಿಗಳು ದೊಡ್ಡ ಕನಸುಗಳನ್ನು ಕಟ್ಟಿಕೊಳ್ಳಬೇಕು ಎಂದು ರಾಜ್ಯ ಮಾನವ ಹಕ್ಕು ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಶ್ರೀ ಎಲ್. ನಾರಾಯಣಸ್ವಾಮಿಯವರು ತಿಳಿಸಿದರು.

ದಿನಾಂಕ 30.1.2024ರಂದು **ಸುತ್ತೂರು ವಸತಿ ಶಾಲೆಯ** ಸಹಸ್ರಾರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಸುತ್ತೂರು ಮಠವು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕಾಗಿ ಸಕಲ ಸೌಲಭ್ಯಗಳನ್ನು ಕಲ್ಪಿಸಿಕೊಟ್ಟಿದೆ. ಪ್ರತಿಯೊಬ್ಬ ವಿದ್ಯಾರ್ಥಿಯು ತಮ್ಮ ಜೀವನದಲ್ಲಿ ದೊಡ್ಡ ಕನಸುಗಳನ್ನು ಕಟ್ಟಿಕೊಂಡು ಮುಂದೆ ಏನಾಗಬೇಕೆಂಬುದನ್ನು ಇಂದೇ ತೀರ್ಮಾನಿಸಬೇಕು. ಅದಕ್ಕೆ ಪೂರಕವಾಗಿ ಹಗಲು – ರಾತ್ರಿ ಎನ್ನದೆ ಕಷ್ಟಪಟ್ಟು ಉತ್ತಮವಾಗಿ ವ್ಯಾಸಂಗ ಮಾಡಿದರೆ,



ಮುಂದಿನ ದಿನಗಳಲ್ಲಿ ಉನ್ನತ ಅಧಿಕಾರಿಗಳಾಗಿ ಸಮಾಜ ಸೇವೆ ಮಾಡಬಹುದು. ಕಡುಬಡತನದ ಕುಟುಂಬದಲ್ಲಿ ಬೆಳೆದ ನನಗೆ ನನ್ನ ತಂದೆ–ತಾಯಿಗಳು ಕಷ್ಟಪಟ್ಟು ಶಿಕ್ಷಣವನ್ನು ಕೊಡಿಸಿದರು. ಶಾಲೆಯಲ್ಲಿ ನೆಲದ ಮೇಲೆ ಕುಳಿತು ಶಿಕ್ಷಣ ಪಡೆದ ನಾನು ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿದ್ದೇನೆ ಎಂದು ಹೇಳಿ ವಿದ್ಯಾರ್ಥಿಗಳಿಗೆ ತಮ್ಮ ಜೀವನದ ಅನುಭವವನ್ನು ಹಂಚಿಕೊಂಡರು.

ರಾಜ್ಯ ಮಾನವ ಹಕ್ಕು ಆಯೋಗದ ಸದಸ್ಯರು ಹಾಗೂ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎಸ್.ಕೆ. ವಂಟಿಗೋಡಿರವರು ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತನ್ನು ಮೈಗೂಡಿಸಿಕೊಂಡರೆ, ನೀವು ನಿಮ್ಮ ಗುರಿಯನ್ನು ಸಾಧಿಸಬಹುದು, ಸಿಕ್ಕ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಪ್ರಜೆಗಳಾಗಬೇಕು ಎಂದರು.

ರಾಜ್ಯ ಮಾನವ ಹಕ್ಕು ಆಯೋಗದ ಮತ್ತೋರ್ವ ಸದಸ್ಯರು ಹಾಗೂ ನಿವೃತ್ತ ಐಎಎಸ್ ಅಧಿಕಾರಿಗಳಾದ ಡಾ. ಟಿ. ಶ್ಯಾಮ್‌ಭಟ್‌ರವರು ಮಾತನಾಡಿ, ನಾನು ಶ್ರೀಮಠದ ಹಿರಿಯ ವಿದ್ಯಾರ್ಥಿಯಾಗಿರುವುದು ನನಗೆ ಹೆಮ್ಮೆಯ ವಿಷಯ. ಶ್ರೀಮಠದಲ್ಲಿ ವಿದ್ಯಾಭ್ಯಾಸ ಮಾಡುವುದೇ ಸುದೈವ, ಇಲ್ಲಿ ಶಿಕ್ಷಣ ಪಡೆಯುತ್ತಿರುವ ನೀವೇ ಪುಣ್ಯವಂತರು. ಮೊಬೈಲ್‌ನಿಂದ ದೂರವಿದ್ದೀರಿ, ದೂರವೇ ಇರಿ. ಹೆಚ್ಚು ಹೆಚ್ಚು ಪುಸ್ತಕಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಿ, ಸಾಧಕರ ಸಾಧನೆಗಳನ್ನು ಓದಿ ಅವರ ಸನ್ಮಾರ್ಗದಲ್ಲಿ ನೀವು ಕೂಡ ನಡೆಯಿರಿ ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷರ ಆಪ್ತಕಾರ್ಯದರ್ಶಿಗಳಾದ ಶ್ರೀ ಅರುಣ್ ಪೂಜಾರ್, ಸಂಯೋಜನಾಧಿಕಾರಿಗಳಾದ ಶ್ರೀ ಜಿ.ಎಲ್. ತ್ರಿಪುರಾಂತಕರವರು ಉಪಸ್ಥಿತರಿದ್ದರು.

## ಬಾಲರಾಮ ದೇಶದ ಸಂಸ್ಕೃತಿಯ ಪ್ರತೀಕ

ಅಯೋಧ್ಯೆಯ ಬಾಲರಾಮ ದೇಶದ ಸಂಸ್ಕೃತಿಯ ಪ್ರತೀಕ ಎಂದು ಪರಮಪೂಜ್ಯ ಜಗದ್ಗುರುಗಳವರು ಹೇಳಿದರು.

**ಅಯೋಧ್ಯೆಯಲ್ಲಿ** ದಿನಾಂಕ 22.1.2024ರಂದು ನಡೆದ ಶ್ರೀರಾಮ ಪ್ರಾಣಪ್ರತಿಷ್ಠಾಪನೆ ಹಾಗೂ ಮಂದಿರ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ ಶ್ರೀರಾಮನದು ಎಲ್ಲರೂ ಪೂಜಿಸುವ, ಎಲ್ಲರೂ ಒಪ್ಪುವ ವ್ಯಕ್ತಿತ್ವ. ಬೇರೆಬೇರೆ ಕಾರಣಗಳಿಂದ ತಡವಾಗಿದ್ದರೂ ಭವ್ಯವಾದ ಶ್ರೀರಾಮನ ಮಂದಿರ ನಿರ್ಮಾಣವಾಗಿದೆ. ಪ್ರತಿ ಹಳ್ಳಿಗಳಲ್ಲೂ ಶ್ರೀರಾಮಮಂದಿರಗಳಿವೆ. ಅಲ್ಲಿ ನಿತ್ಯ ಭಜನೆ, ಗಾಯನ ಹಾಗೂ ಊರಿನ ವ್ಯಾಜ್ಯಗಳ ನ್ಯಾಯ ಪಂಚಾಯ್ತಿಗಳು ನಡೆಯುತ್ತಿರುತ್ತವೆ. ಏಕೆಂದರೆ ಶ್ರೀರಾಮಮಂದಿರದಲ್ಲಿ ರಾಜೀ ಪಂಚಾಯ್ತಿಗಳು ನಡೆದರೆ ನ್ಯಾಯ ದೊರಕುತ್ತದೆ ಎಂಬ ಭಾವನೆ ಜನರ ಮನಸ್ಸಿನಲ್ಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕದಿಂದ ಆದಿಚುಂಚನಗಿರಿ ಜಗದ್ಗುರುಗಳು, ಡಾ. ಡಿ. ವೀರೇಂದ್ರ ಹೆಗ್ಗಡೆ, ಶ್ರೀ ರವಿಶಂಕರ್ ಗುರೂಜಿ, ಶ್ರೀ ನಿರಂಜನಾನಂದಪುರಿ ಮಹಾಸ್ವಾಮಿಗಳು, ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮಿಗಳು, ಶ್ರೀ ವಚನಾನಂದ ಸ್ವಾಮಿಗಳು, ಶ್ರೀ ಶಾಂತವೀರ ಸ್ವಾಮಿಗಳು, ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮಿಗಳು ಮೊದಲಾದವರು ಭಾಗವಹಿಸಿದ್ದರು.

## ಸಾತ್ವಿಕ ಮತ್ತು ಸಮತೋಲಿತ ಆಹಾರ ಸೇವಿಸಬೇಕು

ಸಾತ್ವಿಕ ಮತ್ತು ಸಮತೋಲಿತ ಆಹಾರ ಸೇವನೆಯಿಂದ ಆರೋಗ್ಯವನ್ನು ಉತ್ತಮವಾಗಿಟ್ಟುಕೊಳ್ಳಬಹುದು ಎಂದು ಪರಮಪೂಜ್ಯ ಜಗದ್ಗುರುಗಳವರು ಹೇಳಿದರು.

**ಜೆಎಸ್‌ಎಸ್ ಆಸ್ಪತ್ರೆ,** ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ, ಸಂಘಸಂಸ್ಥೆಗಳು ಹಾಗೂ **ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ** ವತಿಯಿಂದ ದಿನಾಂಕ 8.1.2024ರಂದು ಸರಗೂರಿನಲ್ಲಿ ಒಂದು ವರ್ಷ ಕಾಲ ಜರುಗಿದ ಉಚಿತ ಆರೋಗ್ಯ ತಪಾಸಣಾ ಶಿಬಿರದ ಸಮಾರೋಪದಲ್ಲಿ ಆಶೀರ್ವಚನ ನೀಡಿದ ಪೂಜ್ಯರು ಸರಗೂರಿನಲ್ಲಿ ಕಳೆದ 13 ತಿಂಗಳಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯುತ್ತಾ ಬಂದಿದೆ. ಇದರಿಂದ ಗ್ರಾಮೀಣ ಭಾಗದ ಜನರಿಗೆ ಬಹಳಷ್ಟು ಉಪಯೋಗವಾಗಿದೆ. ರೋಗ ಬಂದಾಗ ತೊಂದರೆಪಡುವ ಬದಲು ರೋಗ ಬರದಂತೆ ಮುನ್ನೆಚ್ಚರಿಕೆ ವಹಿಸಬೇಕು. ಮನುಷ್ಯನಿಗೆ ಖಾಯಿಲೆ ಬಂದರೆ ಧೃತಿಗೆಡದೆ ಧೈರ್ಯದಿಂದ ಪರಿಹಾರ ಕಂಡುಕೊಳ್ಳಬೇಕು. ಆಹಾರ ವಿಹಾರವನ್ನು ಸಮ ಪ್ರಮಾಣದಲ್ಲಿ ಮಾಡಿಕೊಂಡು ಉತ್ತಮ ಆರೋಗ್ಯವನ್ನು ಕಾಪಾಡಿಕೊಂಡು ಹೋಗಬೇಕು. ರೋಗ ಬರುವ ಮುನ್ನವೇ ಆಸ್ಪತ್ರೆಗಳಿಗೆ ತೆರಳಿ ತಪಾಸಣೆಗೊಳಪಡಬೇಕು. ಭಯಪಟ್ಟು ಆಸ್ಪತ್ರೆಯಿಂದ ದೂರ ಉಳಿಯುವುದು ತರವಲ್ಲ. ರೋಗ ಬರದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಶಾಸಕರಾದ ಶ್ರೀ ಅನಿಲ್‌ಕುಮಾರ್ ಚಿಕ್ಕಮಾದುರವರು ಜೆಎಸ್‌ಎಸ್ ಮಹಾವಿದ್ಯಾಪೀಠವು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ನಿರಂತರ ಸೇವೆ ಮಾಡಿಕೊಂಡು ಬರುತ್ತಿದೆ. ಇಂತಹ ಸಂಸ್ಥೆ ಇರುವುದರಿಂದಲೇ ಬಡಜನರು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಪ್ರಗತಿ ಹೊಂದುವಂತಾಗಿದೆ ಎಂದರು.

ತಹಶೀಲ್ದಾರರಾದ ಶ್ರೀಮತಿ ರುಕಿಯಾ ಬೇಗಂರವರು ಹೋಬಳಿಗೊಂದು ಉತ್ತಮ ಸೌಲಭ್ಯಗಳುಳ್ಳ ಆಸ್ಪತ್ರೆಯಿರಬೇಕು. ಹೋಬಳಿ ಮಟ್ಟದಲ್ಲೂ ಸಹ ಇಂತಹ ಶಿಬಿರಗಳ ಆಯೋಜನೆಯಾಗಬೇಕೆಂದು ಹೇಳಿದರು.

ಹಂಚಿಪುರ, ದಡದಹಳ್ಳಿ ಹಾಗೂ ಪಡುವಲು ಮಠದ ಶ್ರೀಗಳು, ಸಮಾಜ ಸೇವಕರಾದ ಶ್ರೀಮತಿ ಸುಧಾ ಮೃತ್ಯುಂಜಯಪ್ಪ, ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕದ ಅಧ್ಯಕ್ಷರಾದ ಶ್ರೀ ಡಿ.ಜಿ. ಶಿವರಾಜು ಮಾತನಾಡಿದರು. ಆಸ್ಪತ್ರೆಯ ಪ್ರಭಾರ ನಿರ್ದೇಶಕರಾದ ಡಾ. ಸಿ.ಪಿ. ಮಧು ಶಿಬಿರದ ವರದಿಯನ್ನು ಮಂಡಿಸಿದರು. ಪ್ರಾಂಶುಪಾಲರಾದ ಡಾ. ಬಸವನಗೌಡಪ್ಪನವರು ಶಿಬಿರದ ಉದ್ದೇಶದ ಬಗ್ಗೆ ತಿಳಿಸಿದರು. ಶ್ರೀಮತಿ ಮಂಜುಳ ಮತ್ತು ಶ್ರೀಮತಿ ರಜಿನಿ ಆದೀಶ್ ಪ್ರಾರ್ಥಿಸಿದರು. ಶ್ರೀ ಮಹಮದ್ ಅಂಜುಮ್ ಪಾಷ ಸ್ವಾಗತಿಸಿದರು. ಶ್ರೀ ಸಿದ್ದಪ್ಪ ವಂದಿಸಿದರು, ಶ್ರೀಮತಿ ಶ್ವೇತ ಕಾರ್ಯಕ್ರಮ ನಿರೂಪಿಸಿದರು.

## ವೃದ್ಧರ ಸಮಗ್ರ ಆರೈಕೆ



**ಮೈಸೂರಿನ ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್** ವತಿಯಿಂದ ದಿನಾಂಕ 18.12.2023ರಂದು ವೃದ್ಧರ ಸಮಗ್ರ ಆರೈಕೆಯ ಬಗ್ಗೆ ಅತಿಥಿ ಉಪನ್ಯಾಸ ಕಾರ್ಯಕ್ರಮವನ್ನು ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿತ್ತು. ರಾಜಾಸ್ಥಾನದ ಮೌಂಟ್ ಅಬು ಗ್ಲೋಬಲ್ ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದಲ್ಲಿ ವೈದ್ಯರಾಗಿ ಸೇವೆ ಸಲ್ಲಿಸುತ್ತಿರುವ ಡಾ. ಮಹೇಶ್ ಹೇಮಾದ್ರಿರವರು ತಮ್ಮ ಉಪನ್ಯಾಸದಲ್ಲಿ ವೃದ್ಧರ ಸಮಗ್ರ ಆರೈಕೆ, ವ್ಯವಸ್ಥಿತ ವಯಸ್ಸಿನ ಬದಲಾವಣೆ ಹಾಗು ವಯೋವೃದ್ಧರಲ್ಲಿ ಕಂಡುಬರುವಂತಹ ತುರ್ತು ಸನ್ನಿವೇಶದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು. ತದನಂತರ ಡಾ. ರಂಗನಾಥ್‌ರವರು ಧ್ಯಾನದ ಉಪಯೋಗಗಳು ಹಾಗು ಧ್ಯಾನ ಮಾಡುವ ವಿಧಾನವನ್ನು ತಿಳಿಸಿಕೊಟ್ಟರು.

## ಭೂತಾಯಿಯನ್ನು ಪ್ರತಿಯೊಬ್ಬರು ಪೂಜಿಸಬೇಕು



ಅಮೆರಿಕದಲ್ಲಿ ನೆಲೆಸಿರುವ ಮಂಡ್ಯದ ಡಾ. ಎಚ್.ಎನ್. ಲಕ್ಷ್ಮಿನರಸಿಂಹಮೂರ್ತಿಯವರು ಶ್ರೀ ಸುತ್ತೂರು ಕ್ಷೇತ್ರಕ್ಕೆ ಭೇಟಿ ನೀಡಿ ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ಜೆಎಸ್‌ಎಸ್ ವಸತಿ ಶಾಲೆಯ ಸಹಸ್ರಾರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು (17 ಜನವರಿ 2024)

ಭೂಮಿತಾಯಿಯನ್ನು ಪ್ರತಿಯೊಬ್ಬರು ಪೂಜಿಸಬೇಕು ಎಂದು ಅಮೆರಿಕದಲ್ಲಿ ನೆಲೆಸಿರುವ ಮಂಡ್ಯದ ಡಾ. ಎಚ್.ಎನ್. ಲಕ್ಷ್ಮಿನರಸಿಂಹಮೂರ್ತಿರವರು ಹೇಳಿದರು.

**ಶ್ರೀ ಸುತ್ತೂರು ಕ್ಷೇತ್ರದಲ್ಲಿ** ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 17.1.2024ರಂದು ವಸತಿ ಶಾಲೆಯ ಸಹಸ್ರಾರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಭೂಮಿತಾಯಿಯು ಎಲ್ಲರಿಗೂ ದೇವತೆಯಂತೆ. ನಮಗೆ ಎಲ್ಲವನ್ನೂ ಕರುಣಿಸಿದ್ದಾಳೆ. ಆದ್ದರಿಂದ ಸದಾಕಾಲ ನಾವು ಭೂಮಿಯನ್ನು ಸ್ಮರಿಸಿಕೊಳ್ಳಬೇಕು. ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತು, ಸಂಯಮ, ಮಾನವೀಯ ಮೌಲ್ಯಗಳು, ಭಾರತೀಯ ಸಂಸ್ಕೃತಿಯನ್ನು ಅಳವಡಿಸಿಕೊಳ್ಳಬೇಕು. ಪ್ರಾರ್ಥನೆ, ಯೋಗ ಮತ್ತು ಧ್ಯಾನವನ್ನು ಅಳವಡಿಸಿಕೊಳ್ಳುವುದರಿಂದ ಏಕಾಗ್ರತೆ, ಲವಲವಿಕೆ, ಓದಿನ ಕಡೆ ಹೆಚ್ಚಿನ ಆಸಕ್ತಿ ಉಂಟಾಗಲು ಸಹಕಾರಿಯಾಗುತ್ತದೆ. ನಿಮ್ಮೆಲ್ಲರ ಚಿತ್ತ ಅದರತ್ತ ಸದಾ ಇರಲಿ ಎಂದು ಹೇಳಿದರು.

ಡಾ. ಎಚ್.ಎನ್. ಲಕ್ಷ್ಮಿನರಸಿಂಹಮೂರ್ತಿರವರ ಪುತ್ರರಾದ ಡಾ. ವಿವೇಕ್‌ಮೂರ್ತಿರವರು ಅಮೆರಿಕದ ವೈದ್ಯಕೀಯ ಕ್ಷೇತ್ರದ ಮಹೋನ್ನತ ಸರ್ಕಾರದ ಹುದ್ದೆಯಾದ ಸರ್ಜನ್ ಜನರಲ್‌ರಾಗಿ ಮೊದಲ ಭಾರತೀಯ ಮೂಲದ ವ್ಯಕ್ತಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕಾರ್ಯಕ್ರಮದಲ್ಲಿ ಶ್ರೀಮತಿ ಮೈತ್ರೇಯಿ ಲಕ್ಷ್ಮಿನರಸಿಂಹಮೂರ್ತಿಯವರು ಉಪಸ್ಥಿತರಿದ್ದರು.

**ಮಾಸಿಕ ಸಾಮೂಹಿಕ ವಿವಾಹ – 2024**

**ಶ್ರೀ ಸುತ್ತೂರು ಕ್ಷೇತ್ರ**

**ಮಾರ್ಚ್ 15, ಶುಕ್ರವಾರ**

**ವಿವರಗಳಿಗೆ ಸಂಪರ್ಕಿಸಿ**

**ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಸಂಸ್ಥೆಗಳು**

**ಸುತ್ತೂರು**

**ದೂರವಾಣಿ : 08221–232223, 232224**

## ಮಧ್ಯಂತರದಲ್ಲಿ ಶಾಲೆ ಬಿಟ್ಟಿರುವ ಮಕ್ಕಳಿಗೆ ಕರ್ನಾಟಕ ಮುಕ್ತ ವಿದ್ಯಾಲಯ ವರದಾನ




ಮೈಸೂರಿನ ಕರ್ನಾಟಕ ಮುಕ್ತ ವಿದ್ಯಾಲಯದಲ್ಲಿ ದಿನಾಂಕ 5.1.2024ರಂದು ರಾಜ್ಯ ಮಟ್ಟದ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳ ಸಭೆಯನ್ನು ಏರ್ಪಡಿಸಲಾಗಿತ್ತು.

ಡಿಎಸ್‌ಇಆರ್‌ಟಿ ಹಿರಿಯ ಸಹಾಯಕ ನಿರ್ದೇಶಕರಾದ ಶ್ರೀ ಆರ್. ಮಂಜುನಾಥ್‌ರವರು ಸಭೆಯನ್ನು ಉದ್ಘಾಟಿಸಿ ಮಾತನಾಡಿ **ಕರ್ನಾಟಕ ಮುಕ್ತ ವಿದ್ಯಾಲಯ ಜೆಎಸ್‌ಎಸ್ ಮಹಾವಿದ್ಯಾಪೀಠದ ಒಂದು ಅಂಗಸಂಸ್ಥೆಯಾಗಿ** ನಿರ್ವಹಿಸುತ್ತಿರುವ ಕಾರ್ಯವು ಶ್ಲಾಘನೀಯವಾಗಿದೆ. ನಾನಾ ಕಾರಣಗಳಿಂದ ಮಧ್ಯಂತರದಲ್ಲಿ ಶಾಲೆ ಬಿಟ್ಟಿರುವ ಸಾವಿರಾರು ವಿದ್ಯಾರ್ಥಿಗಳನ್ನು ಸೆಕೆಂಡರಿ ಮತ್ತು ಸೀನಿಯರ್ ಸೆಕಂಡರಿ ಹಂತದ 10ನೇ ಮತ್ತು 12ನೇ ತರಗತಿಗೆ ನೇರವಾಗಿ ದಾಖಲಾತಿ ಮಾಡಿಸುವ ಮೂಲಕ ಅವರನ್ನು ಸಮಾಜದ ಶೈಕ್ಷಣಿಕ ಪ್ರಕ್ರಿಯೆ ವಾಹಿನಿಗೆ ಸೇರ್ಪಡೆ ಮಾಡಲು ರಾಜ್ಯದಲ್ಲಿರುವ ಎಲ್ಲಾ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳು ವ್ಯಾಪಕ ಕಾರ್ಯಯೋಜನೆಯನ್ನು ಹಮ್ಮಿಕೊಳ್ಳಬೇಕೆಂದು ತಿಳಿಸಿದರು.

ಕರ್ನಾಟಕ ಮುಕ್ತ ವಿದ್ಯಾಲಯದ ಮುಖ್ಯಸ್ಥರಾದ ಶ್ರೀ ಸಿ.ಎಸ್. ಶಿವಸ್ವಾಮಿರವರು ಕರ್ನಾಟಕ ಮುಕ್ತ ವಿದ್ಯಾಲಯು ಬೆಳವಣಿಗೆಗೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಬಗ್ಗೆ ಸಂಕ್ಷಿಪ್ತ ಮಾಹಿತಿ ನೀಡಿದರು. 2024–25ನೇ ಸಾಲಿನಲ್ಲಿ ಕರ್ನಾಟಕ ಮುಕ್ತ ವಿದ್ಯಾಲಯವು ರಜತ ಮಹೋತ್ಸವವನ್ನು ಆಚರಿಸಿಕೊಳ್ಳುತ್ತಿರುವುದು ಹೆಮ್ಮೆಯ ಸಂಗತಿ ಎಂದು ತಿಳಿಸಿ, ಮುಕ್ತ ವಿದ್ಯಾಲಯಗಳ ಕಲಿಕಾ ಕೇಂದ್ರಗಳಲ್ಲಿರುವ ಸವಾಲುಗಳು ಮತ್ತು ಅಭಿವೃದ್ಧಿಗೆ ಪರಿಹಾರ ಮಾರ್ಗೋಪಾಯಗಳನ್ನು ಸೂಚಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಜೆಎಸ್‌ಎಸ್ ಮಹಾವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗದ ಪ್ರಭಾರ ನಿರ್ದೇಶಕರಾದ ಶ್ರೀ ಕೆ.ಎಲ್. ರೇವಣ್ಣಸ್ವಾಮಿರವರು ವಹಿಸಿದ್ದರು.

# ರಂಗ ನಡಿಗೆ ಹಳ್ಳಿಹೈಕಳ ಕಡೆಗೆ




ಶ್ರೀ ಸುತ್ತೂರು ಕ್ಷೇತ್ರದಲ್ಲಿ 'ರಂಗ ನಡಿಗೆ – ಹಳ್ಳಿಹೈಕಳ ಕಡೆಗೆ' ಜಾನಪದ ಮತ್ತು ರಂಗಭೂಮಿ ತರಬೇತಿ ಶಿಬಿರವನ್ನು ಮೈಸೂರಿನ ಸಮಾಜ ಸೇವಕರಾದ ಶ್ರೀಮತಿ ಸುಧಾ ಮೃತ್ಯುಂಜಯಪ್ಪರವರು ಉದ್ಘಾಟಿಸಿದರು.

**ಶ್ರೀ ಸುತ್ತೂರು ಕ್ಷೇತ್ರದಲ್ಲಿ** ದಿನಾಂಕ 27.1.2024ರಂದು ಜೆಎಸ್‌ಎಸ್ ಉಚಿತ ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ಮೈಸೂರಿನ ರಂಗಾಂತರಂಗ ಹಾಗೂ ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯದ ಸಹಯೋಗದೊಂದಿಗೆ 'ರಂಗ ನಡಿಗೆ – ಹಳ್ಳಿಹೈಕಳ ಕಡೆಗೆ' ಎಂಬ ವಿಷಯ ಕುರಿತು ಜಾನಪದ ಮತ್ತು ರಂಗಭೂಮಿ ತರಬೇತಿ ಶಿಬಿರಕ್ಕೆ ಚಾಲನೆ ನೀಡಲಾಯಿತು.

ಸಮಾಜ ಸೇವಕರಾದ ಶ್ರೀಮತಿ ಸುಧಾ ಮೃತ್ಯುಂಜಯಪ್ಪರವರು ಶಿಬಿರವನ್ನು ಉದ್ಘಾಟಿಸಿ ಮಾತನಾಡಿ ರಂಗಕಲೆಯಲ್ಲಿ ನಾಟಕ ಒಂದು ಭಾಗ ಇದರಲ್ಲಿ ಐತಿಹಾಸಿಕ, ಬೀದಿನಾಟಕ, ಪೌರಾಣಿಕ ಎಂಬ ಹಲವಾರು ಪ್ರಕಾರಗಳಿವೆ. ಹಳ್ಳಿಯಲ್ಲಿರುವ ಮಕ್ಕಳಿಗೆ ರಂಗಭೂಮಿಯಲ್ಲಿ ತೊಡಗಿಸಿಕೊಳ್ಳಲು ಮೈಸೂರಿನ ರಂಗಾಂತರಂಗ ಸಂಸ್ಥಾಪಕರಾದ ಶ್ರೀ ಕೀರ್ತಿರಾಜ್‌ರವರು ಮುಂದಾಗಿರುವುದು ಸಂತೋಷದಾಯಕ ವಿಚಾರ. ಸುತ್ತೂರಿನ ಜೆಎಸ್‌ಎಸ್ ವಸತಿಶಾಲೆಯ ಮಕ್ಕಳಲ್ಲಿ ರಂಗಕಲೆಯನ್ನು ಬೆಳೆಸುವ ಈ ಕಾರ್ಯಕ್ರಮವು ಮಕ್ಕಳು ಉತ್ತಮ ಪ್ರಜೆಗಳಾಗಿ ಬೆಳೆಯಲು ಸಹಾಯಕವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮೈಸೂರಿನ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ಹೆಳವರಹುಂಡಿ ಸಿದ್ದಪ್ಪ ನಾಲ್ಕು ಸಾವಿರ ಮಕ್ಕಳಿರುವ ಪುಟ್ಟ ಭಾರತದಂತಿರುವ ಈ ಸುಂದರ ಕ್ಷೇತ್ರದಲ್ಲಿ ಅರಳುತ್ತಿರುವ ಹೂಗಳಿಗೆ ಈ ಕಾರ್ಯಕ್ರಮವನ್ನು ಆಯೋಜಿಸಿರುವುದು ತುಂಬಾ ಸಂತೋಷವಾಗಿದೆ. ನಾಟಕ ಕಲೆ ಎಂಬುದು ದೈವೀ ಕಲೆ, ಅದು ಪರಿಪೂರ್ಣವಾಗಲು ತರಬೇತಿ ಬಹಳ ಅವಶ್ಯಕ. ಈ ಕೆಲಸವನ್ನು ರಂಗಾತರಂಗ ಸಂಸ್ಥಾಪಕರಾದ ಶ್ರೀ ಕೀರ್ತಿರಾಜ್‌ರವರು ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿದ್ದ ಮೈಸೂರಿನ ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷರಾದ ಶ್ರೀ ಎಂ. ಚಂದ್ರಶೇಖರ್‌ರವರು ನಾಟಕವು ವಿದ್ಯಾವಂತರಿಂದ ಅವಿದ್ಯಾವಂತರ ತನಕ ಎಲ್ಲರೂ ಅಭಿನಯ ಮಾಡುವ ಒಂದು ಉತ್ತಮ ಕಲೆಯಾಗಿದೆ. ಮಹಾಪುರುಷರ ಮಹಾಕಾವ್ಯಗಳು ಎಲ್ಲರ ಬಾಯಲ್ಲಿ ನಲಿದಾಡುವಂತೆ ಮಾಡಿರುವ ಅದ್ಭುತ ಕಲೆಯೇ ನಾಟಕ. ಇದು ಬದುಕಿನ ಒಂದು ಸುಂದರ ಅಂಶ ಎಂದು ನುಡಿದರು.

ಸುತ್ತೂರಿನ ಜೆಎಸ್‌ಎಸ್ ಸಂಸ್ಥೆಗಳ ಸಂಯೋಜನಾಧಿಕಾರಿಗಳಾದ ಶ್ರೀ ಜಿ.ಎಲ್. ತ್ರಿಪುರಾಂತಕ ಶ್ರದ್ಧೆ ಆಸಕ್ತಿ ಇದ್ದರೆ

ಸಾಮಾನ್ಯ ಮನುಷ್ಯನೂ ಉನ್ನತ ವ್ಯಕ್ತಿಯಾಗಬಹುದು. ಆ ಸಾಧನೆಯ ಪಥ ನಿಮ್ಮದಾಗಲಿ. ನಾಟಕ ಎಂಬುದು ಒಂದು ಅದ್ಭುತ ಕಲೆ. ಅದು ಒಬ್ಬ ಸಾಮಾನ್ಯ ವ್ಯಕ್ತಿಯನ್ನು ಪರಿಪೂರ್ಣ ವ್ಯಕ್ತಿಯನ್ನಾಗಿ ರೂಪಿಸುವುದರ ಜೊತೆಗೆ ಗ್ರಹಿಕಾ ಸಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

ಮುಖ್ಯೋಪಾಧ್ಯಾಯರಾದ ಶ್ರೀ ಮ.ಗು. ಬಸವಣ್ಣ, ನಿಲಯಪಾಲಕಿ ಶಶಿಕಲಾ, ವಿದ್ಯಾರ್ಥಿಗಳು, ಶಿಕ್ಷಕರು ಮೊದಲಾದವರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಮೈಸೂರಿನ ರಂಗಾಂತರಂಗದ ಸಂಸ್ಥಾಪಕರಾದ ಶ್ರೀ ಕೆ.ಎಂ. ಕೀರ್ತಿರಾಜ್ ಸ್ವಾಗತಿಸಿದರು. ಶ್ರೀಮತಿ ಪಿ. ರೂಪಾ ವಂದಿಸಿದರು. ಶ್ರೀಮತಿ ಎಸ್. ಪಲ್ಲವಿ ನಿರೂಪಿಸಿದರು.

## ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಉದ್ಘಾಟನೆ




**ಬೆಂಗಳೂರಿನ ಮೈಲಸಂದ್ರದ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ದಿನಾಂಕ 8.1.2024ರಂದು ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ನವೆಂಬರ್ ಮಾಹೆಯಲ್ಲಿ ಸುತ್ತೂರಿನಲ್ಲಿ ನಡೆದ ಏಳು ದಿನಗಳ ಮೂಲ ತರಬೇತಿ ಶಿಬಿರದಲ್ಲಿ ತರಬೇತಿ ಪಡೆದ ಶಿಕ್ಷಕರು ನಾಲ್ಕು ತಂಡಗಳನ್ನು ಆಯ್ಕೆ ಮಾಡಿದ್ದರು. ಆಯ್ಕೆಯಾದ ತಂಡಗಳ ವಿದ್ಯಾರ್ಥಿಗಳಿಗೆ ಗಣ್ಯರಿಂದ ಸ್ಕಾರ್ಫ್‌ಗಳನ್ನು ಧರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಬೆಂಗಳೂರಿನ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀ ಎಂ.ಕೆ. ಖಾನ್‌ರವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಜಿಲ್ಲಾ ತರಬೇತಿ ಆಯುಕ್ತರಾದ ಶ್ರೀ ಟಿ.ಕೆ. ನಾರಾಯಣಸ್ವಾಮಿಯವರು ವಿದ್ಯಾರ್ಥಿಗಳಿಗೆ ಸ್ಕೌಟ್ಸ್ ಅಂಡ್ ಗೈಡ್ಸ್‌ನ ಮಹತ್ವ, ಹಿನ್ನೆಲೆ, ಬೆಳೆದು ಬಂದ ಹಾದಿ, ಕರ್ತವ್ಯಗಳ ಬಗ್ಗೆ ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಶ್ರೀ ಸಂಪತ್ ಕುಮಾರ್ ಮತ್ತು ಶ್ರೀ ನಾರಾಯಣ ಶೆಟ್ಟಿಯವರು ಸ್ಕೌಟ್ಸ್ ಅಂಡ್ ಗೈಡ್ಸ್ ಪದಕಗಳ ಬಗ್ಗೆ ವಿವರಣೆ ನೀಡಿದರು.

ಮುಖ್ಯೋಪಾಧ್ಯಾಯರಾದ ಶ್ರೀ ಸಿ.ಬಿ. ಕುಪೇಂದ್ರಪ್ಪರವರು ತರಬೇತಿ ಪಡೆದ ಶಿಕ್ಷಕರುಗಳು ಮುಂಬರುವ ದಿನಗಳಲ್ಲಿ ಮಕ್ಕಳಿಗೆ ಪೂರಕವಾದ ತರಬೇತಿ ನೀಡಿ, ರಾಜ್ಯ ಪುರಸ್ಕಾರ ಮತ್ತು ರಾಷ್ಟ್ರಪತಿ ಪದಕಗಳನ್ನು ಕೊಡಿಸುವಲ್ಲಿ ಹೆಚ್ಚಿನ ಪಾತ್ರ ವಹಿಸಬೇಕು. ಪೂರಕವಾಗಿ ಜಿಲ್ಲಾ ಸಂಘದಿಂದ ನಮ್ಮ ಶಾಲೆಗೆ ಜಿಲ್ಲಾ ಆಯುಕ್ತರು ಮಾರ್ಗದರ್ಶನ ಕೊಡಿಸಬೇಕು ಎಂದು ಹೇಳಿದರು.

ಶ್ರೀಮತಿ ಬಿ.ಎನ್. ಮಂಜುಳಾ ಹಾಗೂ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶ್ರೀ ಚಂದ್ರಶೇಖರ್ ಸ್ವಾಗತಿಸಿದರು. ಶ್ರೀಮತಿ ಪ್ರಭಾಮಣಿ ವಂದಿಸಿದರು ಹಾಗು ಶ್ರೀ ವಿ. ಸೋಮು ಕಾರ್ಯಕ್ರಮ ನಿರೂಪಿಸಿದರು.

## ಸಾಂಸ್ಕೃತಿಕ, ಸಾಹಿತ್ಯಕ, ಕ್ರೀಡಾ ವೇದಿಕೆಗಳ ಸಮಾರೋಪ



**ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಪದವಿ ಪೂರ್ವ ಕಾಲೇಜಿನಲ್ಲಿ** ದಿನಾಂಕ 11.1.2024ರಂದು ಸಾಂಸ್ಕೃತಿಕ, ಸಾಹಿತ್ಯಕ ಹಾಗೂ ಕ್ರೀಡಾ ವೇದಿಕೆಯ ಸಮಾರೋಪ ಸಮಾರಂಭ ಹಮ್ಮಿಕೊಳ್ಳಲಾಗಿತ್ತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಡಾ. ಎಂ.ಡಿ. ಸುದರ್ಶನ್‌ರವರು ಸಮಾರೋಪ ಭಾಷಣ ಮಾಡುತ್ತಾ ಮೊಬೈಲ್ ವಿದ್ಯಾರ್ಥಿಗಳಿಗೆ ಧನಾತ್ಮಕ ಮತ್ತು ಋಣಾತ್ಮಕ ಚಿಂತನೆಗೂ ಕಾರಣವಾಗಿದೆ. ಮೊಬೈಲ್ ಎನ್ನುವುದು ವರವೂ ಅಲ್ಲ ಶಾಪವೂ ಅಲ್ಲ ಇದು. ಚಾಕನ್ನು ತರಕಾರಿ ಹಚ್ಚಲು ಮತ್ತು ಹತ್ಯೆ ಮಾಡಲು ಬಳಸುವಂತೆ ಇದರ ಬಳಕೆ ಇದೆ. ಮೊಬೈಲನ್ನು ಧನಾತ್ಮಕವಾಗಿ ಬಳಸುವ ಮೂಲಕ ಉತ್ತಮ ಬದುಕನ್ನು ರೂಪಿಸಿಕೊಳ್ಳಲು ಬಳಸುವುದು ವಿದ್ಯಾರ್ಥಿ ಜೀವನದಲ್ಲಿ ಪ್ರಮುಖವಾಗಿರುತ್ತದೆ. ಪೋಷಕರು ತಮ್ಮ ಮಕ್ಕಳ ಬಗ್ಗೆ ಅಪಾರವಾದ ಕನಸು ಕಟ್ಟಿ ಶಿಕ್ಷಣಕ್ಕೆ ಹಣ ವ್ಯಯ ಮಾಡುತ್ತಾರೆ. ಅವರ ಅತ್ಯುನ್ನತ ಆಸೆಯನ್ನು ಪೂರೈಸುವ ಕಡೆಗೆ ವಿದ್ಯಾರ್ಥಿನಿಯರು ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪತ್ರಿಕಾ ಮಧ್ಯಮ ಅತ್ಯುತ್ತಮ ಸಾಧನವಾಗಿದ್ದು ವಿದ್ಯಾರ್ಥಿ ದೆಸೆಯಲ್ಲೇ ಪತ್ರಿಕೆಗಳನ್ನು ಓದುವುದನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಬಹುಮಾನ ವಿತರಿಸಿ ಮಾತನಾಡಿದ 'ಏಕಲವ್ಯ' ಪ್ರಶಸ್ತಿ ಪುರಸ್ಕೃತರು, ಅಂತಾರಾಷ್ಟ್ರೀಯ ಬ್ಯಾಸ್ಕೆಟ್‌ಬಾಲ್ ಕ್ರೀಡಾಪಟುಗಳಾದ ಡಾ. ಎಂ.ಆರ್. ಸವಿತ ಪ್ರಶಾಂತ್‌ರವರು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಅಲೋಚನಾ ಶಕ್ತಿಯನ್ನು ವೃದ್ಧಿಸಿಕೊಳ್ಳುವುದು ಮುಖ್ಯವಾಗಿದೆ. ಇದಕ್ಕಾಗಿ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಕ್ರೀಡೆ ಅತ್ಯುತ್ತಮ ಸಾಧನ. ಸಂವಹನ ಕೌಶಲ್ಯ ಉತ್ತಮಪಡಿಸಿಕೊಂಡರೇ ಅದು ವೃತ್ತಿ ಜೀವನಕ್ಕೆ ಸಹಾಯಕವಾಗುತ್ತದೆ. ಕ್ರೀಡೆಯು ಮಧುಮೇಹ ಹಾಗೂ ರಕ್ತದ ಒತ್ತಡದಂತಹ ಕಾಯಿಲೆಗಳನ್ನು ನಿಯಂತ್ರಿಸುವುದರಲ್ಲಿ ಸಹಕಾರಿಯಾಗಿದೆ. ಕ್ರೀಡೆಯು ತಾಳ್ಮೆ, ಸಂಯಮವನ್ನು ಕಲಿಸಿ ಹೇಗೆ ಧೈರ್ಯವನ್ನು ಹೆಚ್ಚಿಸಿಕೊಳ್ಳಬೇಕೆಂಬುದನ್ನು ತಿಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆಂದು ಹೇಳಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕರಾದ ಶ್ರೀ ಬಿ. ನಿರಂಜನಮೂರ್ತಿರವರು ಮಾತನಾಡುತ್ತಾ 'ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ' ಎಂಬ ಧ್ಯೇಯವನ್ನು ಹೊಂದಿದ್ದ ಪೂಜ್ಯ ರಾಜೇಂದ್ರ ಶ್ರೀಗಳವರ ದೂರದೃಷ್ಟಿಯ ಪ್ರತಿಫಲವಾಗಿ ಮಹಿಳಾ ಕಾಲೇಜನ್ನು ನಿರ್ಮಾಣ ಮಾಡಿ ಶ್ರೀಗಳು ಲಕ್ಷಾಂತರ ಹೆಣ್ಣುಮಕ್ಕಳ ಬದುಕಿಗೆ ದಾರಿದೀಪವಾಗಿದ್ದಾರೆ. ವಿದ್ಯಾರ್ಥಿ ಜೀವನದಲ್ಲಿ ಶಿಕ್ಷಣ, ಉದ್ಯೋಗ, ಮದುವೆ ವಿಷಯಗಳಲ್ಲಿ ಆಯ್ಕೆ ಬಹಳ ಪ್ರಮುಖವಾದದ್ದು. ಅದು ನಮ್ಮ ಸುಂದರ ಬದುಕನ್ನ ರೂಪಿಸಲು ಮುಖ್ಯ ಪಾತ್ರವಹಿಸುತ್ತದೆ. ಸದೃಢ ಭಾರತವನ್ನು ಕಟ್ಟಲು ಸದೃಢ ವ್ಯಕ್ತಿಗಳ ಅವಶ್ಯಕತೆ ಇರುವುದರಿಂದ ಭಾರತೀಯ ಸನಾತನ ಸಂಸ್ಕೃತಿ ನಮಗೆ ಇದನ್ನು ಕಲಿಸುತ್ತದೆ. ವಿದ್ಯಾರ್ಥಿಗಳು ಸಂಸ್ಕೃತಿ ಸಂಸ್ಕಾರದೊಂದಿಗೆ ಹೊರಹೊಮ್ಮಿ ಸಾರ್ಥಕ ಬದುಕಿನೆಡೆಗೆ ಸಾಗಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ಶ್ರೀಮತಿ ಎಂ.ಪಿ. ರಾಜೇಶ್ವರಿ, ಸಾಂಸ್ಕೃತಿಕ ಹಾಗೂ ಸಾಹಿತ್ಯಕ ವೇದಿಕೆಯ ಸಂಚಾಲಕರಾದ ಶ್ರೀ ಎಂ.ವಿ. ಯೋಗೀಶ್ ಕುಮಾರ್ ಮತ್ತು ಕ್ರೀಡಾ ವೇದಿಕೆ ಸಂಚಾಲಕರಾದ ಶ್ರೀ ಎಂ. ಶಿವಕುಮಾರಸ್ವಾಮಿ ಉಪಸ್ಥಿತರಿದ್ದರು. ಶ್ರೀ ಹೆಚ್.ಬಿ. ಶ್ರೀಧರ್ ಸ್ವಾಗತಿಸಿದರು. ಶ್ರೀ ಕೆ.ಎಂ. ಜ್ಯೋತಿಪ್ರಕಾಶ ಸಾಂಸ್ಕೃತಿಕ ಸ್ಪರ್ಧೆಗಳ ವಿಜೇತರ ಪಟ್ಟಿಯನ್ನು ಓದಿದರು. ಕು. ಎಂ.ಎಸ್. ದಿವ್ಯಶ್ರೀ ಕ್ರೀಡೆಯಲ್ಲಿ ವಿಜೇತರಾದವರ ಪಟ್ಟಿಯನ್ನು ಓದಿದರು. ಶ್ರೀ ಬಿ.ಎಂ. ಗುರುಸ್ವಾಮಿ ವಂದಿಸಿದರು. ಕನ್ನಡ ವಿಭಾಗದ ಉಪನ್ಯಾಸಕರಾದ ಡಾ. ಡಿ.ಎಂ. ಮಹೇಂದ್ರಮೂರ್ತಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿನಿಯರು ಹಾಜರಿದ್ದರು. □

## ಸಂಭ್ರಮದ ಶಾಲಾ ವಾರ್ಷಿಕೋತ್ಸವ



**ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ದಿನಾಂಕ 30.12.2023ರಂದು ಶಾಲಾ ವಾರ್ಷಿಕೋತ್ಸವವನ್ನು ಆಚರಿಸಲಾಯಿತು.

ಮೈಸೂರು ದಕ್ಷಿಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀ ಸಿ.ಎನ್. ರಾಜುರವರು ವಚನಕಾರರು ತಮ್ಮ ವಚನಗಳ ಮೂಲಕ ಸಮಾಜಕ್ಕೆ ನೀಡಿರುವ ಸಂದೇಶಗಳನ್ನು ತಿಳಿಸುತ್ತಾ ಏಕಾಗ್ರತೆಯಿಂದ ಅಧ್ಯಯನ ಮಾಡಿದರೆ ಗುರಿ ಸಾಧಿಸಲು ಸಾಧ್ಯ. ವಿದ್ಯಾರ್ಥಿಗಳು ಶಾಲಾ ಜೀವನವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಸಾಧನೆ ಮಾಡುವ ಸಂಕಲ್ಪ ಮಾಡಬೇಕು. ಚೆನ್ನಾಗಿ ಕಲಿತು ಉನ್ನತ ಹುದ್ದೆ ಗಳಿಸುತ್ತೇನೆಂಬ ವಿಶ್ವಾಸ ಹೊಂದಬೇಕು ಎಂದು ತಿಳಿಸಿದರು.

ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ. ಪೂರ್ಣಿಮ ಕ್ರೀಡಾ ಹಾಗೂ ಸಾಂಸ್ಕೃತಿಕ ವಿಭಾಗಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿ ಮಾತನಾಡಿ ವಿದ್ಯಾರ್ಥಿಗಳು ಯಶಸ್ಸು ಸಾಧಿಸಬೇಕಾದರೆ ತಮ್ಮ ಶಾಲಾ ಜೀವನದ ಪ್ರತಿ ಕ್ಷಣಗಳನ್ನು ವ್ಯಯಮಾಡದೆ ಜ್ಞಾನ ಸಂಪತ್ತನ್ನು ತಮ್ಮದಾಗಿಸಿಕೊಳ್ಳಬೇಕು. ಪಠ್ಯ ಹಾಗೂ ಸಹ ಪಠ್ಯ ವಿಷಯಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ಸರ್ವಾಂಗೀಣ ಅಭಿವೃದ್ಧಿ ಸಾಧಿಸಬೇಕೆಂದು ಹೇಳಿದರು.

ಮುಖ್ಯೋಪಾಧ್ಯಾಯರಾದ ಶ್ರೀ ಮಹದೇವಪ್ಪ ಅಧ್ಯಕ್ಷತೆ ವಹಿಸಿದ್ದರು. ಕು. ಗಗನ್ ಸ್ವಾಗತಿಸಿದರು. ಕು. ದಿಶಾ ಮತ್ತು ತಂಡದವರು ಪ್ರಾರ್ಥಿಸಿದರು. ಕು. ಚೈತ್ರ ನಿರೂಪಿಸಿದರು. ಕು ಹರಿಣಿ ವಂದಿಸಿದರು.

## ಮಕರ ಸಂಕ್ರಾಂತಿ ಸಂಭ್ರಮ



**ಮೈಸೂರಿನ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯದ ಜೆಎಸ್‌ಎಸ್ ಪಬ್ಲಿಕ್ ಶಾಲೆಯಲ್ಲಿ** ದಿನಾಂಕ 16.1.2024ರಂದು ಮಕರ ಸಂಕ್ರಾಂತಿ ಹಬ್ಬವನ್ನು ಆಚರಿಸಲಾಯಿತು. ಶಾಲಾ ಪ್ರಾರ್ಥನಾ ಸಭೆಯ ವೇದಿಕೆಯಲ್ಲಿ ಕಪ್ಪು ಹಲಗೆಯ ಮೇಲೆ ಬಣ್ಣಬಣ್ಣದ ಕಾಗದಗಳಿಂದ, ಹೂವುಗಳಿಂದ ಅಲಂಕರಿಸಿ, ಚಿತ್ರ ಬಿಡಿಸಿದ ಮಡಿಕೆಗಳನ್ನಿಟ್ಟು ಗೆಡ್ಡೆಗೆಣಸು, ಕಬ್ಬು, ಎಳ್ಳುಬೆಲ್ಲಗಳನ್ನಿಟ್ಟು ಸಂಪ್ರದಾಯಬದ್ಧವಾಗಿ ಶೃಂಗರಿಸಲಾಗಿತ್ತು. 8ನೇ ತರಗತಿಯ ಮಕ್ಕಳು ಶಾಲಾ ಒಳಗಿನ ಆವರಣದಲ್ಲಿ ಹಬ್ಬದ ವಿಶೇಷತೆಯನ್ನು ಸಾರುವ ಹಲವು ವಿನ್ಯಾಸದ ರಂಗೋಲಿಗಳನ್ನು ಬಿಡಿಸಿ, ವಿವಿಧ ಬಣ್ಣಗಳಿಂದ ಅಲಂಕರಿಸಿದ್ದರು. 9ನೇ ತರಗತಿಯ ವಿದ್ಯಾರ್ಥಿಗಳು ಸುಗ್ಗಿ ಹಾಡಿಗೆ ನೃತ್ಯವನ್ನು ಪ್ರಸ್ತುತಪಡಿಸಿದರು. 3ನೇ ತರಗತಿ ವಿದ್ಯಾರ್ಥಿಗಳು ಹಬ್ಬದ ಉಡುಗೆ ತೊಡುಗೆಗಳನ್ನುಟ್ಟು ಸಂಕ್ರಾಂತಿ ಹಬ್ಬದ ಹಿನ್ನಲೆಯನ್ನು ಕುರಿತಾದ ಹಾಡೊಂದನ್ನು ಸುಮಧುರವಾಗಿ ಹಾಡಿದರು. 9ನೇ ತರಗತಿಯ ವಿದ್ಯಾರ್ಥಿಗಳು ಸಂಕ್ರಾಂತಿ ಹಬ್ಬದ ಆಚರಣೆ, ಅದರ ಮಹತ್ವವನ್ನು ತಿಳಿಸುವ ಕಿರುನಾಟಕವೊಂದನ್ನು ಪ್ರಸ್ತುತ ಪಡಿಸಿದರು. ಶಾಲೆಯಲ್ಲೇ ತಯಾರಿಸಿದ ಸಿಹಿ ಪೊಂಗಲನ್ನು ವಿದ್ಯಾರ್ಥಿಗಳಿಗೆ ನೀಡಲಾಯಿತು. ಹಬ್ಬದ ಸಡಗರ ಸಂಭ್ರಮದಲ್ಲಿ ಮಿಂದೆದ್ದ ಮಕ್ಕಳು ಸಂತಸದಿಂದ ಓದು–ಬರಹ–ಅಭ್ಯಾಸದೊಟ್ಟಿಗೆ ತರಗತಿಗಳು ಎಂದಿನಂತೆ ಸಾಗಿ ಸಂಪನ್ನಗೊಂಡವು.



ಜೆಎಸ್‌ಎಸ್ ಮಹಾವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀ ಎಂ.ಸಿ. ಪ್ರವೀಣ್‌ಕುಮಾರ್‌ರವರು ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ 'ವಚನ ಸಾಹಿತ್ಯದಲ್ಲಿ ಗುರುಶಿಷ್ಯರ ಪರಿಕಲ್ಪನೆ' ಎಂಬ ವಿಷಯದ ಕುರಿತು ಸಂಶೋಧನಾ ಪ್ರಬಂಧ ಮಂಡಿಸಿ ಪಿಹೆಚ್.ಡಿ ಪಡೆದಿರುತ್ತಾರೆ. 32ನೇ ಘಟಿಕೋತ್ಸವದಲ್ಲಿ ಉನ್ನತ ಶಿಕ್ಷಣ ಸಚಿವರಾದ ಶ್ರೀ ಎಂ.ಸಿ. ಸುಧಾಕರ್‌ರವರಿಂದ ಪ್ರಮಾಣಪತ್ರ ಸ್ವೀಕರಿಸುತ್ತಿರುವುದು.

# ಜೆಎಸ್‌ಎಸ್ ಸಂಸ್ಥೆಗಳಲ್ಲಿ ಗಣರಾಜ್ಯೋತ್ಸವ

## ಜೆಎಸ್‌ಎಸ್ ಸಂಸ್ಥೆಗಳು, ಸುತ್ತೂರು



ಸುತ್ತೂರಿನ ಜೆಎಸ್‌ಎಸ್ ಸಂಸ್ಥೆಗಳಲ್ಲಿ ನಡೆದ 75ನೆಯ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಬೆಂಗಳೂರಿನ ನಿವೃತ್ತ ಪೊಲೀಸ್ ಮಹಾನಿರ್ದೇಶಕರಾದ ಶ್ರೀ ಎಲ್. ರೇವಣ್ಣಸಿದ್ದಯ್ಯನವರು ಮಾತನಾಡುತ್ತಿರುವುದು. ಸಾರ್ವಜನಿಕ ಶಿಕ್ಷಣ ಇಲಾಖೆಯ ನಿವೃತ್ತ ನಿರ್ದೇಶಕರು ಹಾಗೂ ಭಾರತ್ ಸ್ಕೌಟ್ಸ್‌ನ ರಾಜ್ಯ ಜಂಟಿ ಕಾರ್ಯದರ್ಶಿಗಳಾದ ಶ್ರೀ ಬಿ.ಕೆ. ಬಸವರಾಜರವರು ಮತ್ತು ಸಂಸ್ಥೆಯ ಮುಖ್ಯಸ್ಥರುಗಳಿದ್ದಾರೆ.

**ಸುತ್ತೂರಿನ ಜೆಎಸ್‌ಎಸ್ ಸಂಸ್ಥೆಗಳ** ಆಶ್ರಯದಲ್ಲಿ 75ನೆಯ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು.

ಬೆಂಗಳೂರಿನ ನಿವೃತ್ತ ಪೊಲೀಸ್ ಮಹಾನಿರ್ದೇಶಕರಾದ ಶ್ರೀ ರೇವಣ್ಣಸಿದ್ದಯ್ಯ ಧ್ವಜಾರೋಹಣ ನೆರವೇರಿಸಿ, ವ್ಯಾಪಾರಕ್ಕೆಂದು ಭಾರತಕ್ಕೆ ಬಂದ ಬ್ರಿಟಿಷರು ಸುಮಾರು 200 ವರ್ಷಗಳಿಗಿಂತ ಹೆಚ್ಚು ಕಾಲ ನಮ್ಮ ದೇಶವನ್ನು ಆಳಿ ನಮ್ಮ ದೇಶದ ಸಂಪತ್ತನ್ನು ಕೊಳ್ಳೆ ಹೊಡೆದು ಬಡದೇಶ ಎಂದು ಕರೆದರು. ಎಚ್ಚೆತ್ತ ನಮ್ಮವರ ಹೋರಾಟದಿಂದ ಅರ್ಧರಾತ್ರಿಯಲ್ಲಿ ನಮಗೆ ಸ್ವಾತಂತ್ರ್ಯ ಕೊಟ್ಟು ಹೋದರು. ಆದರೆ ಈ ದಿನ ಇಡೀ ಪ್ರಪಂಚಕ್ಕೆ ನಮ್ಮ ದೇಶ ಬೆಳಕು ಕೊಡುತ್ತಿದೆ. ಅಂತಾರಾಷ್ಟ್ರೀಯ ಮಟ್ಟದ ವೇದಿಕೆಯಲ್ಲಿ ಭಾರತವು ಹಲವು ಕ್ಷೇತ್ರಗಳಲ್ಲಿ ಉನ್ನತ ಸ್ಥಾನದಲ್ಲಿರುವುದನ್ನು ನಾವು ಕಾಣಬಹುದು. ಇದಕ್ಕೆಲ್ಲ ಕಾರಣ ನಮ್ಮ ಭಾರತ ಸಂವಿಧಾನ. 12ನೇ ಶತಮಾನದ ಬಸವಣ್ಣನವರ ವಚನಗಳ ಹಲವು ಅಂಶಗಳನ್ನು ನಮ್ಮ ಸಂವಿಧಾನದಲ್ಲಿ ಕಾಣಬಹುದು. ಪ್ರಪಂಚದಲ್ಲೇ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ದೇಶ ನಮ್ಮ ಭಾರತ. ಮಕ್ಕಳು ಒಳ್ಳೆಯ ಸಂಸ್ಕಾರವನ್ನು ಮೈಗೂಡಿಸಿಕೊಂಡರೆ, ಒಳ್ಳೆಯ ಕುಟುಂಬ ಹಾಗೂ ದೇಶವನ್ನು ಕಟ್ಟಬಹುದು ಎಂದು ತಿಳಿಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ನಿವೃತ್ತ ನಿರ್ದೇಶಕರು ಹಾಗೂ ಭಾರತ್ ಸ್ಕೌಟ್ಸ್‌ನ ರಾಜ್ಯ ಜಂಟಿ ಕಾರ್ಯದರ್ಶಿಗಳಾದ ಶ್ರೀ ಬಿ.ಕೆ. ಬಸವರಾಜ ಭಾರತ ದೇಶ ಸ್ವಾತಂತ್ರ ಬಂದ ಪ್ರಾರಂಭದಲ್ಲಿ ಕೇವಲ ಶೇ. 18 ರಷ್ಟು ಶಿಕ್ಷಣ ಹೊಂದಿತ್ತು, ಹಾಗೇ ಬಡತನವನ್ನೂ ಹೊಂದಿತ್ತು. ಈ ದಿನ ಹಲವು ಕ್ಷೇತ್ರಗಳಲ್ಲಿ ಸಾಧನೆ ಮಾಡಿ ವಿಶ್ವಗುರು ಆಗಿದೆ. ನಮ್ಮ ಸಂವಿಧಾನ ಹಾಗೂ ಸರ್ಕಾರದ ಮೂರು ಅಂಗಗಳು ಸರಿಯಾದ ರೀತಿಯಲ್ಲಿ ಕರ್ತವ್ಯ ನಿರ್ವಹಿಸುವುದರಿಂದ ಇದೆಲ್ಲಾ ಸಾಧ್ಯವಾಗಿದೆ. 1947ರಿಂದ ಸ್ವತಂತ್ರ ಭಾರತದಿಂದ ನಮ್ಮ ಪ್ರಯಾಣವನ್ನು ಆರಂಭಿಸಿ,

ಆಹಾರ ಮತ್ತು ಅನಕ್ಷರತೆ ಸಮಸ್ಯೆಯನ್ನು ಹೋಗಲಾಡಿಸಿ, ನಾವು ಅಭಿವೃದ್ಧಿಯತ್ತ ಮುನ್ನುಗ್ಗುತ್ತಿದ್ದೇವೆ. ಈ ಸುಸಂದರ್ಭದಲ್ಲಿ ದೇಶದ ಬೆನ್ನೆಲುಬಾದ ರೈತ ಹಾಗೂ ದೇಶವನ್ನು ಕಾಯುವ ಯೋಧರನ್ನು ನೆನೆಯಬೇಕು. ಇಂದಿನ ಯುವಸಮೂಹ ದೇಶಪ್ರೇಮವನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಸಂಯೋಜನಾಧಿಕಾರಿಗಳಾದ ಶ್ರೀ ಜಿ.ಎಲ್. ತ್ರಿಪುರಾಂತಕ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥರುಗಳಾದ ಶ್ರೀ ಸಂಪತ್ತು, ಶ್ರೀ ವೀರಭದ್ರಯ್ಯ, ಶ್ರೀಮತಿ ಹೆಚ್.ವಿ. ದಿವ್ಯಾ, ಡಾ. ಹೆಚ್.ಎಂ. ಮಹೇಶ್, ಶ್ರೀ ಎಸ್. ಶಿವಸ್ವಾಮಿ, ಶ್ರೀ ಜಿ. ಶಿವಮಲ್ಲು, ಶ್ರೀ ಮ.ಗು. ಬಸವಣ್ಣ, ಶ್ರೀ ಜಿ.ಎಂ. ಷಡಕ್ಷರಿ, ಶ್ರೀ ಮಹದೇವಪ್ರಸಾದ್, ಶ್ರೀ ಎಂ. ಷಡಕ್ಷರಿ ಹಾಗೂ ಶ್ರೀಮತಿ ಪಿ. ಸುಶೀಲ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಚಕ್ರವರ್ತಿ, ರಿಷಿಕಾ, ಚಂದನ ಗಣರಾಜ್ಯೋತ್ಸವ ಕುರಿತು ಭಾಷಣ ಮಾಡಿದರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶ್ರೀಮತಿ ಜಿ. ನಂದಿನಿ ಸ್ವಾಗತಿಸಿದರು. ಶ್ರೀಮತಿ ಎಸ್. ಶೋಭಾ ವಂದಿಸಿದರು. ಶ್ರೀಮತಿ ಜಿ.ಎಸ್. ಜಗದಾಂಬಿಕ ಕಾರ್ಯಕ್ರಮ ನಿರೂಪಿಸಿದರು.

### ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಕೊಳ್ಳೇಗಾಲ

**ಕೊಳ್ಳೇಗಾಲದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ** ದಿನಾಂಕ 26.1.2024ರಂದು 75ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು.

ನಗರಸಭೆಯ ಮಾಜಿ ಉಪಾಧ್ಯಕ್ಷರಾದ ಶ್ರೀ ಹರ್ಷರವರು ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತಾ ನಮ್ಮ ಸಂವಿಧಾನವು ಪ್ರಜೆಗಳಿಗೆ ಶಾಂತಿ ಮತ್ತು ಏಕತೆಯಿಂದ ಬದುಕುವ ಅವಕಾಶ ಮಾಡಿಕೊಟ್ಟಿದೆ. ನಾವುಗಳು ಪ್ರಜಾಪ್ರಭುತ್ವದ ಮೂರು ಅಂಗಗಳಾದ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ ಇವುಗಳ ಕಾರ್ಯ ವ್ಯಾಪ್ತಿಯ ಬಗ್ಗೆ ತಿಳಿದುಕೊಳ್ಳಬೇಕು. ನಮ್ಮ ಸಂವಿಧಾನದ ಮಹತ್ವವನ್ನು ಕಾಪಾಡುವುದು ಸಂವಿಧಾನದ ಆಶಯವೆಂದು ತಿಳಿಸಿದರು.

ಜೆಎಸ್‌ಎಸ್ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ. ಪ್ರಭುರವರು ಸಂವಿಧಾನವು ಸಮಾಜದ ಪ್ರತಿಯೊಬ್ಬ ವ್ಯಕ್ತಿಯ ವ್ಯಕ್ತಿತ್ವದ ವಿಕಸನಕ್ಕೆ ಸಹಕಾರಿಯಾಗಿದೆ. ಸಂವಿಧಾನದ ಮಹತ್ವವನ್ನು ನಾವು ತಿಳಿಯಬೇಕು. ಸಂವಿಧಾನ ರಚನಾ ಸಮಿತಿಯ ದೂರದೃಷ್ಟಿಯನ್ನು ಅರ್ಥ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಜೆಎಸ್‌ಎಸ್ ಮಹಿಳಾ ಕಾಲೇಜು, ಪದವಿಪೂರ್ವ ಹಾಗೂ ನರ್ಸಿಂಗ್ ಶಾಲೆಯ ವಿದ್ಯಾರ್ಥಿನಿಯರು ಗಣತಂತ್ರವನ್ನು ಕುರಿತು ಭಾಷಣ ಮಾಡಿದರು. ನರ್ಸಿಂಗ್ ಶಾಲೆಯ ಪ್ರಾಂಶುಪಾಲರಾದ ಶ್ರೀ ಹೇಮೇಶ್‌ಮೂರ್ತಿ, ಜೆಎಸ್‌ಎಸ್ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎನ್. ಮಹದೇವಸ್ವಾಮಿ, ಬೋಧಕ–ಬೋಧಕೇತರರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ತೃತೀಯ ಬಿಎ ವಿದ್ಯಾರ್ಥಿನಿ ಕು. ಆರತಿ ಕಾರ್ಯಕ್ರಮ ನಿರೂಪಿಸಿದರು.

### ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು, ನಂಜನಗೂಡು

**ನಂಜನಗೂಡಿನ ಜೆಎಸ್‌ಎಸ್ ಪದವಿ ಹಾಗೂ ಪದವಿಪೂರ್ವ ಕಾಲೇಜುಗಳ** ಸಂಯುಕ್ತಾಶ್ರಯದಲ್ಲಿ ದಿನಾಂಕ 26.1.2024ರಂದು 75ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು. ಮುಖ್ಯ ಅತಿಥಿಗಳಾದ ಹುಣಸೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಎಂ.ಆರ್. ಬಸವಲಿಂಗಸ್ವಾಮಿಯವರು ಸ್ವಾತಂತ್ರ ಪೂರ್ವ ಹಾಗೂ ಸ್ವಾತಂತ್ರ ನಂತರದ ವಿದ್ಯಮಾನಗಳನ್ನು ಅರಿತು ನಾವು ಮುನ್ನಡೆಯಬೇಕು. ಕ್ರಿ.ಪೂ. 6ನೇ ಶತಮಾನದಲ್ಲಿ ಬಳಕೆಯಲ್ಲಿದ್ದ ಮಹಾಜನಪದ ಕೂಟವೇ ಇಂದು ಗಣರಾಜ್ಯವಾಗಿ ಮಾರ್ಪಟ್ಟಿದೆ. ಸಂವಿಧಾನದ ರಚನೆ ಹಾಗೂ ಗುರಿಯನ್ನು ಅರ್ಥ ಮಾಡಿಕೊಂಡು ಸಂವಿಧಾನದ ಆಶಯಕ್ಕೆ ತಕ್ಕಂತೆ ನಡೆಯಬೇಕು ಎಂದು ತಿಳಿಸಿದರು.

ಪ್ರಾಂಶುಪಾಲರಾದ ಡಾ. ಸಿ.ಎಸ್. ಹೊನ್ನೇಗೌಡ ಭಾರತ ದೇಶ ಸರ್ವತಂತ್ರ ಸ್ವತಂತ್ರ ಗಣರಾಜ್ಯವಾಗಿ ಪ್ರಸ್ತುತ ಜಾಗತಿಕ ಮಟ್ಟದಲ್ಲಿ ವಿಶ್ವಗುರುವಿನ ಸ್ಥಾನವನ್ನು ಪಡೆಯುವ ಹಿಂದೆ ಅನೇಕ ರಾಜಕೀಯ ಚಿಂತಕರು, ಸ್ವಾತಂತ್ರ ಹೋರಾಟಗಾರರು ಮುಂತಾದವರ ನಿಸ್ವಾರ್ಥ ಸೇವೆ ಹಾಗೂ ತ್ಯಾಗ ಬಲಿದಾನಗಳಿವೆ. ವಿಶೇಷವಾಗಿ ರಾಷ್ಟ್ರವನ್ನು

ಸದಾ ರಕ್ಷಣೆ ಮಾಡುತ್ತಿರುವ ಸೈನಿಕರಿಗೆ ಧನ್ಯವಾದಗಳನ್ನು ಹೇಳಬೇಕು. ದೇಶದ ಪ್ರತಿಯೊಬ್ಬ ಪ್ರಜೆಯೂ ಪ್ರಜ್ಞಾವಂತರಾಗಿ ಸರ್ವ ಧರ್ಮಿಯರನ್ನು ಸಮಾನವಾಗಿ ಗೌರವಿಸುವುದರ ಮುಖೇನ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಅರ್ಥವನ್ನು ನೀಡಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ 2022–23ನೇ ಶೈಕ್ಷಣಿಕ ಸಾಲಿನ ಪದವಿ ಕಾಲೇಜಿನ 'ಕೂಜನ' ವಾರ್ಷಿಕ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು. ಸಂಚಿಕೆಯ ಸಂಪಾದಕರು ಹಾಗೂ ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಎಂ.ಎನ್. ಜಯಶೀಲ ಸಂಚಿಕೆಯ ಸಿದ್ಧತೆ ಹಾಗೂ ಆಶಯವನ್ನು ಕುರಿತು ಮಾತನಾಡಿದರು. ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಕೆ.ಎನ್. ಶಿವಕುಮಾರ್ ಸಂಚಿಕೆ ಉತ್ಕೃಷ್ಟವಾದ ಲೇಖನಗಳೊಂದಿಗೆ ಸುಂದರವಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಕಚೇರಿ ಅಧೀಕ್ಷಕರಾದ ಶ್ರೀ ಕೆ.ವಿ. ಸುಂದರರಾಜು, ಎನ್‌ಸಿಸಿ ಅಧಿಕಾರಿಯಾದ ಶ್ರೀ ಕೆ.ಜೆ. ಶಶಿಕುಮಾರ್, ರಾಷ್ಟ್ರೀಯ ಹಬ್ಬಗಳ ಸಮಿತಿ ಸಂಚಾಲಕರಾದ ಶ್ರೀ ಪಿ.ಎಂ. ವಿಕ್ರಂ, ಎನ್‌ಸಿಸಿ ಹವಲ್ದಾರ್ ಶ್ರೀ ಕುಲವಂತ್ ಸಿಂಗ್ ಮತ್ತು ಹವಲ್ದಾರ್ ದೇವೇಂದ್ರ ಸಿಂಗ್‌ರವರು, ಅಧ್ಯಾಪಕರು, ಅಧ್ಯಾಪಕೇತರರು, ಎನ್‌ಸಿಸಿ ಕೆಡೆಟ್‌ಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕು. ಡಿ. ನಮಿತ ದೇಶಭಕ್ತಿಗೀತೆ ಹಾಡಿದರು. ಶ್ರೀ ಜಿ. ಗೂಳಪ್ಪಸ್ವಾಮಿ ಸ್ವಾಗತಿಸಿದರು. ಶ್ರೀ ಎಂ. ಸುರೇಶ್ ವಂದಿಸಿದರು ಹಾಗೂ ಶ್ರೀಮತಿ ಬಿ. ರೂಪರವರು ಕಾರ್ಯಕ್ರಮ ನಿರೂಪಿಸಿದರು.

### ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಮಾಲೂರು

**ಮಾಲೂರಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ** ಸಮುಚ್ಚಯದಲ್ಲಿ ದಿನಾಂಕ 26.1.2024ರಂದು ಗಣರಾಜ್ಯೋತ್ಸವ ಆಚರಿಸಲಾಯಿತು. ಸಂಯೋಜನಾಧಿಕಾರಿಗಳಾದ ಶ್ರೀ ಎಸ್.ಹೆಚ್. ಮಹೇಶ್ವರಪ್ಪರವರು 12ನೇ ಶತಮಾನದಲ್ಲಿ ಅನುಭವಮಂಟಪ ಸ್ಥಾಪನೆಯ ಮೂಲಕ ಸಕಲ ಜೀವಾತ್ಮಗಳಿಗೆ ಲೇಸನ್ನು ಬಯಸುವ ಸಮಾನತೆ ನೀಡಿದ ಕೀರ್ತಿ ಕರ್ನಾಟಕದ ಸಾಂಸ್ಕೃತಿಕ ರಾಯಭಾರಿಗಳಾದ ಬಸವಣ್ಣನವರಿಗೆ ಸಲ್ಲುತ್ತದೆ. ಅದರ ಪರಿಕಲ್ಪನೆಯಲ್ಲಿ ಬೃಹತ್ ಸಂವಿಧಾನ ರಚನೆ ಮಾಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ನೇತೃತ್ವದ ಕರಡು ಸಮಿತಿ ಸದಸ್ಯರ ಶ್ರಮವನ್ನು ನೆನೆದು, ಸಂವಿಧಾನವನ್ನು ಎಲ್ಲರೂ ಓದಿ ಅರ್ಥೈಸಿಕೊಂಡು ನಮ್ಮ ನಮ್ಮ ಜವಾಬ್ದಾರಿಗಳನ್ನು ಅರಿತುಕೊಳ್ಳಬೇಕು. ಸಹಬಾಳ್ವೆಯೊಂದಿಗೆ ಒಳ್ಳೆಯ ನಾಗರಿಕರಾಗಿ ಬಾಳಬೇಕು. ಎಲ್ಲಾ ಧರ್ಮಗಳ ಗ್ರಂಥಗಳನ್ನು ಓದಿ, ಅದರಲ್ಲಿನ ಉತ್ತಮ ಅಂಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಶ್ರೀ ಗೌರಿಶಂಕರ್, ಶ್ರೀಮತಿ ರೆಹನಾಬೇಗಂ, ಶ್ರೀಮತಿ ಯು. ರಮ್ಯ ಹಾಗೂ ಶ್ರೀ ಚಂದ್ರಶೇಖರ್ ಆರಾಧ್ಯ ಮತ್ತು ಸಂಸ್ಥೆಯ ಬೋಧಕ, ಬೋಧಕೇತರ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸಹ ಶಿಕ್ಷಕರಾದ ಶ್ರೀ ಎಂ.ಎನ್. ನಂಜುಂಡಸ್ವಾಮಿ ಮಾತನಾಡಿದರು. ಶ್ರೀ ಕೆ.ಎಸ್. ಗಿರೀಶ್‌ಕುಮಾರ್ ಸ್ವಾಗತಿಸಿದರು. ಶ್ರೀ ಎನ್.ಎಂ. ಪ್ರಸನ್ನ ವಂದಿಸಿದರು. ಶ್ರೀ ಜೆ.ಇ. ಬಸವರಾಜಪ್ಪ ಕಾರ್ಯಕ್ರಮ ನಿರೂಪಿಸಿದರು.

### ಜೆಎಸ್‌ಎಸ್ ಪಬ್ಲಿಕ್ ಶಾಲೆ, ಬಾಗೆ

**ಬಾಗೆಯ ಜೆಎಸ್‌ಎಸ್ ಪಬ್ಲಿಕ್ ಶಾಲೆಯಲ್ಲಿ** 75ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು. ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಶ್ರೀ ಗಿರಿರಾಜ್‌ರವರು ಭಾರತ ಭವ್ಯ ಪರಂಪರೆಯುಳ್ಳ ನಾಡು. ಸಿಂಧುವಿನಿಂದ ಹಿಂದುವಿನವರೆಗೆ ಬೆಳೆದು ಬಂದ ಪರಿ ಅದ್ಭುತವಾಗಿರುವುದು. ಭಾರತದಲ್ಲಿ ಪ್ರಾಚೀನ ಕಾಲದಿಂದಲೂ ವಿಚಾರ, ಆಚಾರ, ಸಂಸ್ಕೃತಿ, ಕಲೆ, ಸಾಹಿತ್ಯ, ಸಂಗೀತ ಮೊದಲಾದವುಗಳಿಗೆ ಮಹತ್ವದ ಸ್ಥಾನವಿದೆ. ಸ್ವಾತಂತ್ರ್ಯಪೂರ್ವದಲ್ಲಿ ವಿವಿಧ ಭಾಗಗಳಲ್ಲಿ ಹಂಚಿಹೋಗಿದ್ದ ಭಾರತ ವಿವಿಧತೆಯಲ್ಲಿ ಏಕತೆಯನ್ನು ಸಾಧಿಸಿರುವ ನಾಡಾಗಿದೆ. ದೇಶಾಭಿಮಾನಿಗಳು ಬ್ರಿಟೀಷರ ವಿರುದ್ಧ ಕ್ರಾಂತಿ ಕಹಳೆ ಊದುವ ಮೂಲಕ ದೇಶ ಸ್ವಾತಂತ್ರ್ಯವಾಯಿತು. ಪ್ರಪಂಚದ ಸಂವಿಧಾನಗಳ ಪೈಕಿ ಭಾರತದ ಸಂವಿಧಾನ ದೊಡ್ಡ ಸಂವಿಧಾನ ಮತ್ತು ಲಿಖಿತ ರೂಪದ ಸಂವಿಧಾನವಾಗಿದೆ. ವಲ್ಲಭಭಾಯಿ ಪಟೇಲ್ ಅವರು ದೇಶವನ್ನು ಒಗ್ಗೂಡಿಸುವ ಕೆಲಸ ಮಾಡಿದರು. ಅವರು ಒಗ್ಗೂಡಿಸಿರುವ ದೇಶವನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಭಾರತದ ಭವಿಷ್ಯ ಪ್ರಜೆಗಳಾದ ನಿಮ್ಮ ಹೊಣೆಯಾಗಿದೆ. ಶ್ರಮದ ಮೂಲಕ ಜೀವನದಲ್ಲಿ

ಉನ್ನತಿಗೇರುವ ಸಾಮರ್ಥ್ಯ ನಿಮ್ಮದಾಗಲಿ. ಏನೇ ಆಗಲಿ ಮೊದಲು ಮಾನವೀಯ ಮೌಲ್ಯಗಳನ್ನು ರೂಢಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು.

ಪ್ರಾಂಶುಪಾಲರಾದ ಶ್ರೀ ಬಿ. ಮಧುಕುಮಾರ್, ವಿದ್ಯಾರ್ಥಿಗಳಾದ ಕು. ನಾಂದಿಶ್ರೀ ಮತ್ತು ಕು. ತನ್ವಿ ಸೋಮಯ್ಯ ಮಾತಾನಾಡಿದರು. ಕು. ವಿಕ್ರಾಂತ್ ಮತ್ತು ಸಂಗಡಿಗರು ಪ್ರಾರ್ಥನೆ ಸಲ್ಲಿಸಿದರು. ಕು. ಕೆ.ಕೆ. ರಿಷಿಕಾ ಸ್ವಾಗತಿಸಿದರು. ಕು. ಅದಿತಿ ಎಸ್. ಭರ್ತೂರ್ ವಂದಿಸಿದರು. ಕು. ನಿಗಮ ಆರ್. ಗೌಡ ಮತ್ತು ಕು. ಮಹಮದ್ ನೆಹಾನ್ ಕಾರ್ಯಕ್ರಮ ನಿರೂಪಿಸಿದರು.

### ಜೆಎಸ್‌ಎಸ್ ಸಂಸ್ಥೆಗಳು
### ಶ್ರೀ ಶಿವರಾತ್ರೀಶ್ವರ ನಗರ, ಮೈಸೂರು

**ಜೆಎಸ್‌ಎಸ್ ವೈದ್ಯಕೀಯ ಮತ್ತು ಸಂಶೋಧನಾ ಅಕಾಡೆಮಿಯ** ಆಶ್ರಯದಲ್ಲಿನ ಅಂಗಸಂಸ್ಥೆಗಳಾದ ವೈದ್ಯಕೀಯ ಕಾಲೇಜು, ಔಷಧ ವಿಜ್ಞಾನ ಕಾಲೇಜು, ದಂತವೈದ್ಯಕೀಯ ಕಾಲೇಜು, ಪದವಿಪೂರ್ವ ಕಾಲೇಜು ಮತ್ತು ಪ್ರೌಢಶಾಲೆಗಳ ಸಂಯುಕ್ತ ಆಶ್ರಯದಲ್ಲಿ 75ನೇ ಗಣರಾಜ್ಯೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ಹಣಕಾಸು ವಿಭಾಗದ ನಿರ್ದೇಶಕರಾದ ಶ್ರೀ ಪುಟ್ಟಸುಬ್ಬಪ್ಪ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡಿ ಸ್ವಾತಂತ್ರ್ಯ ನಂತರ ಭಾರತದ ಅನೇಕ ಸಮಸ್ಯೆಗಳನ್ನು ನಿವಾರಿಸಿ ಒಂದು ಸುಭದ್ರ ಆಡಳಿತವನ್ನು ಅಳವಡಿಸಿಕೊಳ್ಳಲು ಒಂದು ವಿಶಿಷ್ಟವಾದ ಸಂವಿಧಾನವನ್ನು ರಚಿಸಿ ಜಾರಿಗೆ ತಂದ ಮಹನೀಯರನ್ನು ನೆನೆಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು. ಕುಲಸಚಿವರಾದ ಡಾ. ಮಂಜುನಾಥ್, ಪ್ರಾಂಶುಪಾಲರುಗಳಾದ ಡಾ. ಬಸವನಗೌಡಪ್ಪ, ಡಾ. ರವೀಶ, ಡಾ. ಜಿ.ವಿ. ಪೂಜಾರ್, ಡಾ. ದಾಕ್ಷಾಯಿಣಿ, ರಾಜಮ್ಮ, ಶ್ರೀ ಎಸ್.ಪಿ. ಶಿವಶಂಕರ್, ಪರೀಕ್ಷಾ ವಿಭಾಗದ ಮುಖ್ಯಸ್ಥರಾದ ಡಾ. ಸುಧೀಂದ್ರ ಭಟ್, ಡಾ. ಅಮಿತ್ ಸಿಬ್ಬಂದಿವರ್ಗದವರು ಹಾಜರಿದ್ದರು. ಕು. ಮುಕ್ತಾಕ್ಷಿ ಪ್ರಾರ್ಥಿಸಿದರು. ಡಾ. ದಿವ್ಯ ರಾವ್ ಸ್ವಾಗತಿಸಿದರು. ಡಾ. ಆಶಾ ಶ್ರೀನಿವಾಸನ್ ವಂದಿಸಿದರು

### ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಚಾಮರಾಜನಗರ




**ಚಾಮರಾಜನಗರದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ** ವತಿಯಿಂದ ದಿನಾಂಕ 26.1.2024ರಂದು 75ನೇ ಗಣರಾಜ್ಯೋತ್ಸವ ಆಚರಿಸಲಾಯಿತು.

